

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 246 | ₹ ಬೆಲೆ: 4 | Thursday, 23, November,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23

## ಜಾತಿಗಣತಿ ವರದಿಯ ಮೂಲ ಪ್ರತಿ ಕಾಣೆಯಾದ ಬಗ್ಗೆ ನನಗೆ ಗೊತ್ತಿಲ್ಲ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಜಾತಿಗಣತಿ ವರದಿಯಲ್ಲಿ ಏನಿದೆ ಅಂತಾ ನಾನು ನೋಡಿಲ್ಲ. ವರದಿಯ ಮೂಲ ಪ್ರತಿ ಕಾಣೆಯಾದ ಬಗ್ಗೆ ನನಗೆ ಗೊತ್ತಿಲ್ಲ. ಜಾತಿಗಣತಿ ವರದಿ ನೋಡಿ ಪರಿಶೀಲನೆ ಮಾಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ನಗದರಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜಯಪ್ರಕಾಶ್ ಹೆಗ್ಡೆ ಅವಧಿ ಈ ತಿಂಗಳು ಮುಗಿಯುತ್ತದೆ. ಜಾತಿಗಣತಿ ವರದಿ ಕೊಡುವವರೆಗೆ ಮುಂದುವರಿಯಲು ಹೇಳಿದ್ದೇನೆ ಎಂದರು.

ಜಾತಿಗಣತಿ ವರದಿಗೆ ಒಕ್ಕಲಿಗ ಸಮುದಾಯ ವಿರೋಧ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ್ದು, ಜಾತಿಗಣತಿ ವರದಿಯಲ್ಲಿ ಏನಿದೆ ಅಂತಾ ನೋಡಬೇಕಲ್ವಾ. ಡಿಸೆಂಬರ್ ಅಥವಾ ಜನವರಿಯೊಳಗೆ ವರದಿ ಸಲ್ಲಿಕೆಗೆ ಹೇಳಿದ್ದೇನೆ. ಒಕ್ಕಲಿಗರ ಸಂಘದವರು ಕೂಡ ನಿನ್ನೆ ಬಂದು ಮನವಿ ಕೊಟ್ಟಿದ್ದಾರೆ. ವರದಿ ಕೊಟ್ಟ ಮೇಲೆ ಒಕ್ಕಲಿಗರ ಮನವಿ ಪರಿಶೀಲನೆ ಮಾಡುತ್ತೇವೆ. ವರದಿಯನ್ನು ನಾನೇ ನೋಡಿಲ್ಲ, ಬೇರೆಯವರು ಹೇಗೆ ನೋಡುತ್ತಾರೆ ಎಂದು ಹೇಳಿದ್ದಾರೆ.

ಸಮಾಜದಲ್ಲಿ ಎಲ್ಲರೂ ಕೂಡ ಆರೋಗ್ಯವಂತರಾಗಿ ಬದುಕಬೇಕು: ಕೇಂದ್ರ ಸರ್ಕಾರ 5 ಕೆಜಿ ಅಕ್ಕಿ ಕೊಡುತ್ತಿದೆ. ಫುಡ್ ಸೆಕ್ಯೂರಿಟಿ ಆಯಕ್ಟ್ ತಂದಿದ್ದು ಡಾ. ಮನಮೋಹನ್ ಸಿಂಗ್. ಪ್ರಧಾನಿ ನರೇಂದ್ರ ಮೋದಿ ನಾನೇ ವಿಶ್ವಗುರು ಅಂತಾ ಹೇಳುತ್ತಾರೆ. ನ್ಯಾಷನಲ್ ಫ್ಯಾಮಿಲಿ ಹೆಲ್ತ್ ರಿಪೋರ್ಟ್ ಇದೆ. ಸಮಾಜದಲ್ಲಿ ಎಲ್ಲರೂ ಕೂಡ ಆರೋಗ್ಯವಂತರಾಗಿ ಬದುಕಬೇಕು. ಕೆಲವು ರೋಗ ನಮ್ಮ ಪ್ರಯತ್ನದಿಂದ ತಡೆಗಟ್ಟಲು ಸಾಧ್ಯತೆ ಇದೆ. ನಾವು ಪ್ರತಿಯೊಬ್ಬರೂ ಪೌಷ್ಠಿಕ ಆಹಾರ ಸೇವನೆ ಮಾಡಬೇಕು. ನಮ್ಮ ಸಮಾಜದಲ್ಲಿ ಬಡತನ ಹಾಗೂ ಅನಕ್ಷರತೆ ಇದೆ ಎಂದರು.

ಹಳ್ಳಿಗಳಲ್ಲಿ ಬಡವರು ರೊಟ್ಟಿ, ಖಾರ ತಿಂದು ಜೀವನ ಮಾಡ್ತಾರೆ. ಹಸಿವು ಮುಕ್ತ ರಾಜ್ಯ ಮಾಡಬೇಕೆಂದು ಅನ್ನಭಾಗ್ಯ ಜಾರಿ ಮಾಡಿದೆವು. ಶಾಲೆಗಳಲ್ಲಿ ಮೊಟ್ಟೆ ತಿನ್ನದವರಿಗೆ ಬಾಳೆಹಣ್ಣು ವಿತರಿಸಲಾಗಿದೆ. ಮೊಟ್ಟೆ ತಿನ್ನುವವರಿಗೆ ವಾರಕ್ಕೆ ಎರಡು ದಿನ ಮೊಟ್ಟೆ ಕೊಡ್ತೀವಿ ಎಂದು ತಿಳಿಸಿದರು.

185 ಕೋಟಿ 75 ಲಕ್ಷ ರೂ. ಹಣ ಅನೀಮೀಯ ಮುಕ್ತ ಕರ್ನಾಟಕ ಮಾಡುತ್ತೇವೆ. ಮೊಟ್ಟೆ ತಿನ್ನೋರಿಗೆ ವಾರಕ್ಕೆ ಎರಡು ದಿನ ಮೊಟ್ಟೆ ಕೊಡುತ್ತೇವೆ. ಅನೀಮಿಯ ಬರೋದು ಕಬ್ಬಿಣದ ಅಂಶ ಕಡಿಮೆ ಇದ್ದಾಗ ಮಾತ್ರ ಕಬ್ಬಿಣ ಅಂಶ ತರಕಾರಿ, ಮೊಟ್ಟೆ ಬೇರೆ ಬೇರೆ ಆಹಾರದಲ್ಲಿ ಜಾಸ್ತಿ ಸಿಗುತ್ತೆ. ಇವೆಲ್ಲ ಹೆಚ್ಚು ಬಳಸುವ ಕೆಲಸ ಆಗಬೇಕಿದೆ. ಸುಮ್ಮನೇ ಕಾರ್ಯಕ್ರಮ ಮಾಡಿದರೆ ಆಗಲ್ಲ. ಅನೀಮಿಯ ಮುಕ್ತ ಆಗೋದ್ರಲ್ಲಿ ಕೆಲಸ ಮಾಡಿ. ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಹೇಳಿದ್ದಾರೆ.

## ಬೆಳಗಾವಿ ಅಧಿವೇಶನದ ವೇಳೆ ಪ್ರತಿಭಟನೆ ನಡೆಸದಂತೆ ಸಂಘಟನೆಗಳ ಮನವೊಲಿಸಲು ಸಿಎಂಗೆ ಸಭಾಪತಿ ಪತ್ರ



ಬೆಂಗಳೂರು: ಬೆಳಗಾವಿ ಅಧಿವೇಶನದ ವೇಳೆ ಪ್ರತಿಭಟನೆಗಳನ್ನು ನಡೆಸದಂತೆ ಸಂಘಟನೆಗಳ ಮನವೊಲಿಸಲು ಕೋರಿ ಸಭಾಪತಿ ಬಸವರಾಜ ಹೊರಟ್ಟಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಸಚಿವರುಗಳಿಗೆ ಸಲಹಾ ಪತ್ರ ಬರೆದಿದ್ದಾರೆ.

ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 4, 2023ರಿಂದ ಡಿಸೆಂಬರ್ 15ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಸಲು ಸರ್ಕಾರ ನಿರ್ಧರಿಸಿದೆ. ಈ ಹಿನ್ನೆಲೆಯಲ್ಲಿ ಹೊರಟ್ಟಿ ಅವರು ಸಿದ್ದರಾಮಯ್ಯ ಸೇರಿದಂತೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಶಿಕ್ಷಣ ಸಚಿವ ಎಸ್.ಮಧು ಬಂಗಾರಪ್ಪರಿಗೆ ಪ್ರತ್ಯೇಕವಾಗಿ ಪತ್ರ ಬರೆದಿದ್ದಾರೆ.

ಅಧಿವೇಶನದ ಅತ್ಯಮೂಲ್ಯವಾದ ಸಮಯ ಕೇವಲ ಪ್ರತಿಭಟನೆ, ಸತ್ಯಾಗ್ರಹ, ಧರಣಿಗಳಿಂದ ವ್ಯರ್ಥವಾಗುತ್ತಿದೆ ಎಂದು ಹಲವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುವ ಅಧಿವೇಶನ ವ್ಯವಸ್ಥಿತ ಹಾಗೂ ಅರ್ಥಪೂರ್ಣವಾಗಿ ನಡೆಸಲು ಸಲಹೆ ನೀಡಿದ್ದಾರೆ. ಅಧಿವೇಶನದ ಸಂದರ್ಭದಲ್ಲಿ ಕೃಷಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಹಲವಾರು ಸಂಘಟನೆಗಳು ಧರಣಿ, ಸತ್ಯಾಗ್ರಹ ನಡೆಸುವುದು ಸಾಮಾನ್ಯವಾಗಿದೆ. ಅಧಿವೇಶನ ಆರಂಭಗೊಳ್ಳುವ ಮುಂಚೆಯೇ ಸಂಬಂಧಪಟ್ಟ ಸಂಘಟನೆಗಳ ಪ್ರಮುಖರ ಸಭೆ ಕರೆದು ಅವರ ಬೇಡಿಕೆ ಕುರಿತು ಸವಿಸ್ತಾರವಾಗಿ ಚರ್ಚೆ ನಡೆಸಬೇಕು.

ಬಳಿಕ ಅವುಗಳ ಪರಿಹಾರಕ್ಕೆ ಪ್ರಯತ್ನಿಸುವ ಮೂಲಕ ಸಂಘಟನೆಗಳು ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಧರಣಿ ಸತ್ಯಾಗ್ರಹ ನಡೆಸದಂತೆ ಸಂಘಟನೆಗಳ ಮುಖಂಡರಲ್ಲಿ ಮನವಿ ಮಾಡಲು ಮುಖ್ಯಮಂತ್ರಿ ತಮ್ಮ ಸಚಿವ ಸಂಪುಟದ ಸಂಬಂಧಪಟ್ಟ ಸಚಿವರಿಗೆ ಸೂಚಿಸಬೇಕು ಹಾಗೂ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಹೊರಟ್ಟಿ ಕೋರಿದ್ದಾರೆ.

ಅಧಿವೇಶನದ ಸಂದರ್ಭದಲ್ಲಿ ಸುವರ್ಣ ವಿಧಾನಸೌಧದ ಹೊರಗಡೆ ಪ್ರತಿಭಟನೆಗಳ ಸಂಖ್ಯೆ ಇಳಿಮುಖವಾದರೆ ಸದನದ ಒಳಗಡೆ ಜನಸಾಮಾನ್ಯರ ಜ್ವಲಂತ ಸಮಸ್ಯೆಗಳ ಕುರಿತು ಅರ್ಥಪೂರ್ಣ ಹಾಗೂ ಗಂಭೀರ ಚರ್ಚೆ ನಡೆಸಲು ಸಾಧ್ಯ. ಅಲ್ಲದೆ, ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡರೆ ಉತ್ತರ ಕರ್ನಾಟಕ ಭಾಗದಲ್ಲಿ ವಿಧಾನ ಮಂಡಲದ ಅಧಿವೇಶನ ನಡೆಸಿದ್ದು, ಸಾರ್ಥಕವಾಗಿ ಸರ್ಕಾರಕ್ಕೆ ಗೌರವ, ಒಳ್ಳೆಯ ಹೆಸರು ಬರುತ್ತದೆ ಎಂದು ಹೊರಟ್ಟಿ ಮನವಿ ಮಾಡಿದ್ದಾರೆ.



## ಕಾಶ್ಮೀರ: ರಜೌರಿಯಲ್ಲಿ ಉಗ್ರರೊಂದಿಗೆ ಗುಂಡಿನ ಕಾಳಗ; ಇಬ್ಬರು ಸೇನಾ ಸಿಬ್ಬಂದಿ ಹುತಾತ್ಮ

ಜಮ್ಮು: ಜಮ್ಮು ಮತ್ತು ಕಾಶ್ಮೀರದ ರಾಜೌರಿ ಜಿಲ್ಲೆಯಲ್ಲಿ ಬುಧವಾರ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ನಡೆದ ಎನ್‌ಕೌಂಟರ್‌ನಲ್ಲಿ ಇಬ್ಬರು ಸೇನಾ ಸಿಬ್ಬಂದಿ ಹುತಾತ್ಮರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಜೌರಿಯ ಕಲಕೋಟೆ ತಹಸಿಲ್‌ನ ಬಾಜಿ ಮಾಲ್ ಪ್ರದೇಶದಲ್ಲಿ ಭದ್ರತಾಪಡೆಗಳು ಹಾಗೂ ಉಗ್ರರ ನಡುವೆ ಭಾರೀ ಗುಂಡಿನ ಚಕಮಕಿ ನಡೆಯುತ್ತಿದೆ ಎಂದು ಅವರು ಹೇಳಿದ್ದಾರೆ.

ಇಬ್ಬರು ಉಗ್ರರು ಅಡಗಿ ಕುಳಿತಿರುವ ಖಚಿತ ಮಾಹಿತಿ ಮೇರೆಗೆ ಭಾರತೀಯ ಸೇನೆ ಮತ್ತು ಜಮ್ಮು ಮತ್ತು ಕಾಶ್ಮೀರ ಪೊಲೀಸರ ಶೋಧ ಕಾರ್ಯಾಚರಣೆ ನಡೆಸಿದ್ದು,ಈ ವೇಳೆ ಉಗ್ರರೊಂದಿಗೆ ಗುಂಡಿನ ಚಕಮಕಿ ನಡೆಯಿತು ಎಂದು ಪೊಲೀಸರು ತಿಳಿಸಿದ್ದಾರೆ.

ಗುಂಡಿನ ಚಕಮಕಿಯಲ್ಲಿ ಒಬ್ಬ ಅಧಿಕಾರಿ ಹಾಗೂ ಒಬ್ಬ ಯೋಧ ಪ್ರಾಣ ಕಳೆದುಕೊಂಡಿದ್ದಾರೆ ಮತ್ತು ಇನ್ನೊಬ್ಬರು ಗಾಯಗೊಂಡಿದ್ದಾರೆ. ಅವರನ್ನು ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಕ್ರಿಕೆಟ್ ಪಂದ್ಯ ವೀಕ್ಷಿಸಲು ತೆರಳುವ ಪ್ರಧಾನಿ ಮೋದಿ ಹಿಂಸಾಚಾರ ಪೀಡಿತ ಮಣಿಪುರಕ್ಕೆ ಭೇಟಿ ನೀಡಿಲ್ಲ; ಪ್ರಿಯಾಂಕಾ ಗಾಂಧಿ




ಜೈಪುರ: ಐಸಿಸಿ ವಿಶ್ವಕಪ್ ಪಂದ್ಯದಲ್ಲಿ ಭಾರತ ಗೆದ್ದರೆ ಸ್ವಲ್ಪಮಟ್ಟಿನ ಶ್ರೇಯಸ್ಸು ಪಡೆಯುವ ನಿರೀಕ್ಷೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಕ್ರಿಕೆಟ್ ಪಂದ್ಯ ವೀಕ್ಷಿಸಲು ಅಹಮದಾಬಾದ್‌ಗೆ ತೆರಳಿದ್ದರು. ಆದರೆ, ಬಿಕ್ಕಟ್ಟಿನ ಕಾರಣ ಹಿಂಸಾಚಾರ ಪೀಡಿತ ಮಣಿಪುರಕ್ಕೆ ಮಾತ್ರ ಭೇಟಿ ನೀಡಲಿಲ್ಲ ಎಂದು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಬುಧವಾರ ಹೇಳಿದ್ದಾರೆ.

ನವೆಂಬರ್ 25 ರಂದು ನಡೆಯಲಿರುವ ವಿಧಾನಸಭಾ ಚುನಾವಣೆಗೆ ಮುನ್ನ ರಾಜಸ್ಥಾನದ ಜೈಪುರ ಜಿಲ್ಲೆಯ ಶಹಪುರದಲ್ಲಿ ನಡೆದ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಅವರು, ಮೋದಿ ಅವರು ಫಕೀರರೆಂದು ಹೇಳಿಕೊಳ್ಳುತ್ತಾರೆ ಮತ್ತು ಅವರ ಆಡಳಿತದಲ್ಲಿ ಬಿಜೆಪಿ ಹೇಗೆ ಶ್ರೀಮಂತ ಪಕ್ಷವಾಯಿತು ಎಂದು ಪ್ರಶ್ನಿಸಿದರು. ಸುಮಾರು ಏಳು ತಿಂಗಳಿನಿಂದ ಮಣಿಪುರ ಜನಾಂಗೀಯ ಹಿಂಸಾಚಾರದಲ್ಲಿ ಮುಳುಗಿದೆ. ಆದರೆ, ಪ್ರಧಾನಿ ಅಲ್ಲಿಗೆ ಹೋಗಲಿಲ್ಲ. ಬದಲಾಗಿ, ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ವಿಶ್ವಕಪ್ ಕ್ರಿಕೆಟ್ ಫೈನಲ್ ಪಂದ್ಯವನ್ನು ವೀಕ್ಷಿಸಲು ಅವರು ಅಹಮದಾಬಾದ್‌ಗೆ ಭೇಟಿ ನೀಡಿದರು ಎಂದು ದೂರಿದರು. 'ಇತ್ತೀಚಿನ ವಿಶ್ವಕಪ್‌ನಲ್ಲಿ ನಮ್ಮ ತಂಡವು ಅವರ ಕಠಿಣ ಪರಿಶ್ರಮದಿಂದ ಫೈನಲ್ ತಲುಪಿತ್ತು. ತಂಡವು ಗೆದ್ದರೆ ಅವರಿಗೆ ಸ್ವಲ್ಪ ಕ್ರೆಡಿಟ್ ಸಿಗಬಹುದು ಎನ್ನುವ ಕಾರಣಕ್ಕಾಗಿಯೇ ಮೋದಿಜಿ ಅಲ್ಲಿಗೆ ತಲುಪಿದರು. ಪ್ರಧಾನಿ ಹೆಮ್ಮೆ ಮತ್ತು ಗೌರವ ಎನಿಸುವ ಅಂತಹ ಸ್ಥಳಗಳಿಗೆ ಮಾತ್ರ ಹೋಗುತ್ತಾರೆ. ಆದರೆ, ಬಿಕ್ಕಟ್ಟಿನ ಪರಿಸ್ಥಿತಿಯಿಂದ ದೂರವಿರುತ್ತದೆ' ಎಂದು ಆರೋಪಿಸಿದರು.

ಪ್ರಧಾನಿ ಮೋದಿ ಮತ್ತು ಕೇಂದ್ರವು ದೊಡ್ಡ ಕೈಗಾರಿಕೋದ್ಯಮಿಗಳ ಸಾಲವನ್ನು ಮನ್ನಾ ಮಾಡಿದೆ. ಆದರೆ, ಬಡವರನ್ನು ನಿರ್ಲಕ್ಷಿಸಿದೆ. ರಾಜಕೀಯದೊಂದಿಗೆ ಧರ್ಮವನ್ನು ಬೆರೆಸುವುದು ಪಾಪ ಎಂದು ಅವರು ಹೇಳಿದರು. ಕೇಂದ್ರ ಮತ್ತು ರಾಜ್ಯಗಳಲ್ಲಿ ಬಿಜೆಪಿ ನೇತೃತ್ವದ ಸರ್ಕಾರಗಳು ದೊಡ್ಡ ಕೈಗಾರಿಕೋದ್ಯಮಿಗಳಿಗಾಗಿ ಕೆಲಸ ಮಾಡುತ್ತಿದ್ದರೆ, ರಾಜಸ್ಥಾನದ ಕಾಂಗ್ರೆಸ್ ಸರ್ಕಾರವು ವಿಶೇಷ ಶಿಬಿರಗಳನ್ನು ನಡೆಸುವ ಮೂಲಕ ಹಣದುಬ್ಬರದಿಂದ ಜನರಿಗೆ ಪರಿಹಾರವನ್ನು ಒದಗಿಸಿದೆ ಎಂದರು. ಪ್ರಿಯಾಂಕಾ ಗಾಂಧಿ ಅವರು ಕಾಂಗ್ರೆಸ್ ಅಭ್ಯರ್ಥಿ ಮನೀಶ್ ಯಾದವ್ ಮತ್ತು ಇಂದ್ರಜ್ ಗುರ್ಜರ್ ಅವರನ್ನು ಬೆಂಬಲಿಸಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ನವೆಂಬರ್ 25ರಂದು ರಾಜಸ್ಥಾನದಲ್ಲಿ ಮತದಾನ ನಡೆಯಲಿದ್ದು, ಡಿಸೆಂಬರ್ 3ರಂದು ಮತ ಎಣಿಕೆ ನಡೆಯಲಿದೆ.

## ಜಾತಿಗಣತಿ ವರದಿಗೆ ಬಿಜೆಪಿ ವಿರೋಧವಿಲ್ಲ: ಬಿ.ವೈ. ವಿಜಯೇಂದ್ರ



ಬೆಂಗಳೂರು: ಜಾತಿಗಣತಿ ವರದಿ ಬಗ್ಗೆ ಬಿಜೆಪಿಯಿಂದ ಯಾವುದೇ ವಿರೋಧವಿಲ್ಲ. ಜಾತಿಗಣತಿಯನ್ನು ರಾಜಕೀಯ ಉದ್ದೇಶಕ್ಕಾಗಿ ದುರುಪಯೋಗ ಪಡಿಸಿ ಕೊಳ್ಳಬಾರದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಜಾತಿಗಣತಿ ಬಗ್ಗೆ ಬಿಜೆಪಿ ನಿಲುವು ಸ್ಪಷ್ಟವಿದೆ.

ಕಾಂಗ್ರೆಸ್ ಸರ್ಕಾರದ ಈ ರೀತಿ ನಡೆಯನ್ನು ಒಪ್ಪಲ್ಲ. ಸಿದ್ದರಾಮಯ್ಯ ಈ ಹಿಂದೆ ಸಿಎಂ ಆಗಿದ್ದಾಗ ಜಾತಿಗಣತಿ ಪ್ರಕ್ರಿಯೆ ಮುಗಿದಿತ್ತು. ಆದರೆ ಸ್ಪಷ್ಟ ನಿಲುವು ತೆಗೆದುಕೊಳ್ಳಲು ಯಾಕೆ ಸಾಧ್ಯವಾಗಿಲ್ಲ? ಈಗ ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ಪ್ರಸ್ತಾಪ ಮಾಡುತ್ತಿದ್ದಾರೆ ಎಂದು ಹೇಳಿದರು.

ಈಗಾಗಲೇ ತಯಾರಾಗಿರುವ ಕಾಂತರಾಜು ವರದಿ ಬಗ್ಗೆ ಮಾಹಿತಿ ತೆಗೆದುಕೊಂಡಿಲ್ಲ. ಒಳಜಾತಿ ಪಕ್ಕಕ್ಕಿಟ್ಟು ಅವರಿಗೆ ಅನುಕೂಲ ಆಗುವ ವರದಿ ನೀಡಿದ್ದಾರೆ ಎಂಬ ಚರ್ಚೆ ನಡೆಯುತ್ತಿದೆ ಎಂದರು.

## ರಾಜ್ಯ ಸರ್ಕಾರದ ನೂತನ ಮುಖ್ಯ ಕಾರ್ಯದರ್ಶಿಯಾಗಿ ರಜನೀಶ್ ಗೋಯೆಲ್ ನೇಮಕ



ಬೆಂಗಳೂರು: ರಾಜ್ಯ ಸರ್ಕಾರದ ನೂತನ ಮುಖ್ಯ ಕಾರ್ಯದರ್ಶಿಯಾಗಿ ಹಿರಿಯ ಐಎಎಸ್ ಅಧಿಕಾರಿ ರಜನೀಶ್ ಗೋಯೆಲ್ ನೇಮಕಗೊಂಡಿದ್ದಾರೆ.

ಈ ಸಂಬಂಧ ರಾಜ್ಯ ಸರ್ಕಾರ ಆದೇಶ ಹೊರಡಿಸಿದ್ದು, ನವೆಂಬರ್ ತಿಂಗಳ ಅಂತ್ಯಕ್ಕೆ ಹಾಲಿ ಮುಖ್ಯ ಕಾರ್ಯದರ್ಶಿ ವಂದಿತ ಶರ್ಮಾ ಅವರ ಅಧಿಕಾರ ಅವಧಿ ಮುಕ್ತಾಯಗೊಳ್ಳಲಿದೆ. ನಂತರ ತೆರವಾಗುವ ಸ್ಥಾನಕ್ಕೆ ಮುಖ್ಯ ಕಾರ್ಯದರ್ಶಿ ಆಗಿ ರಜನೀಶ್ ಗೋಯೆಲ್ ಅವರನ್ನು ನೇಮಕ ಮಾಡಲಾಗಿದೆ.

ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದ 5–6 ಹೆಸರುಗಳ ಪಟ್ಟಿಯಲ್ಲಿ ಸೀನಿಯಾರಿಟಿ ಪ್ರಕಾರ ಹಿರಿಯ ಐಎಎಸ್ ಅಧಿಕಾರಿ ರಜನೀಶ್ ಗೋಯೆಲ್ ಅವರನ್ನು ಸಿಎಸ್ ಸ್ಥಾನಕ್ಕೆ ಆಯ್ಕೆ ಮಾಡಲಾಗಿದೆ. ಹಾಲಿ ಕಾರ್ಯರ್ಶಿಗಳು ತೆರವಾದ ನಂತರ ಅಧಿಕಾರ ಸ್ವೀಕರಿಸಲಿದ್ದಾರೆ.

## 85ಕ್ಕೂ ಹೆಚ್ಚು ಬಾರಿ ಮನೆಗಳ್ಳತನ: ಎಸ್ಕೇಪ್ ಕಾರ್ತಿಕ್ ಬಂಧನ



ಬೆಂಗಳೂರು: 85ಕ್ಕೂ ಅಧಿಕ ಮನೆಗಳ್ಳತನ ಕೃತ್ಯಗಳಲ್ಲಿ ಭಾಗಿಯಾಗಿದ್ದ ಅಂತಾರಾಜ್ಯ ಕಳ್ಳನನ್ನು ಬಂಧಿಸುವಲ್ಲಿ ಗೋವಿಂದರಾಜ ನಗರ ಪೊಲೀಸರು ಯಶಸ್ವಿಯಾಗಿದ್ದಾರೆ.

ಕಾರ್ತಿಕ್ ಅಲಿಯಾಸ್ ಎಸ್ಕೇಪ್ ಕಾರ್ತಿಕ್ (33) ಬಂಧಿತ ಆರೋಪಿ. ಈತ ಕೊತ್ತನೂರು ನಿವಾಸಿಯಾಗಿದ್ದು, ದಕ್ಷಿಣ ಕರ್ನಾಟಕ, ತಮಿಳುನಾಡು ಮತ್ತು ಆಂಧ್ರಪ್ರದೇಶದಾದ್ಯಂತ ಕಳ್ಳತನ ಮಾಡಿದ್ದಾನೆ. 6ನೇ ತರಗತಿವರೆಗೆ ಓದಿರುವ ಆರೋಪಿ, 16ನೇ ವಯಸ್ಸಿನಿಂದಲೇ ಕಳ್ಳತನ ಮಾಡಲು ಆರಂಭಿಸಿದ್ದ. 2005ರಿಂದ ಅಪರಾಧ ಕೃತ್ಯಗಳಲ್ಲಿ ಸಕ್ರಿಯನಾಗಿದ್ದ ಈತನ ಸಹಚರರಾದ ದಿಲೀಪ್ (23) ಮತ್ತು ಸಂಜಯ್ (24) ಅವರನ್ನೂ ಪೊಲೀಸರು ಬಂಧಿಸಿದ್ದಾರೆ. ಆರೋಪಿಗಳಿಂದ 70 ಲಕ್ಷ ಮೌಲ್ಯದ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಕಾರ್ತಿಕ್ ಬಸವೇಶ್ವರನಗರ, ಕೆ.ಪಿ.ಅಗ್ರಹಾರ, ಕಾಮಾಕ್ಷಿಪಾಳ್ಯ ಮತ್ತಿತರ ಬಡಾವಣೆಗಳ ನಿವಾಸಗಳಲ್ಲಿ ಕಳ್ಳತನ ಮಾಡಿದ್ದು, ಆತನ ವಿರುದ್ಧ ಬಾಕಿ ಉಳಿದಿದ್ದ ಹಲವು ಪ್ರಕರಣಗಳಲ್ಲಿ 18 ಬಂಧನ ವಾರೆಂಟ್‌ಗಳು ಜಾರಿಯಾಗಿದ್ದವು. ಅಲ್ಲದೆ, ಮೂರು ಬಾರಿ ಪೊಲೀಸ್ ವಶದಿಂದ ತಪ್ಪಿಸಿಕೊಂಡಿದ್ದ.

2007ರಲ್ಲಿ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ತರಕಾರಿ ವ್ಯಾನ್‌ನಲ್ಲಿ ತಲೆಮರೆಸಿಕೊಂಡು ಪರಾರಿಯಾಗಿದ್ದ. ಮೂರು ವರ್ಷಗಳ ನಂತರ ಸ್ಥಳ ಮಹಜರುಗಾಗಿ ಅಪರಾಧ ಕೃತ್ಯವೆಸಗಿದ್ದ ಸ್ಥಳಕ್ಕೆ ಕರೆದೊಯ್ಯುವಾಗ ಜೆಬಿ ನಗರ ಪೊಲೀಸರ ವಶದಿಂದ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದ. ಆದರೆ ನಂತರ ಮತ್ತೆ ಸಿಕ್ಕಿಬಿದ್ದಿದ್ದ. 2005ರಲ್ಲಿ ಹೆಣ್ಣೂರಿನ ಮನೆಯೊಂದರಲ್ಲಿ 10 ಲಕ್ಷ ರೂ.ನಗದನ್ನು ದೋಚಿ ವೃತ್ತಿಪರ ಕಳ್ಳನಾಗಿ ಪರಿವರ್ತನೆಗೊಂಡಿದ್ದ. ಓಟ, ಜಿಗಿತ ಹಾಗೂ ಗೋಡೆ ಹತ್ತುವುದರಲ್ಲಿ ಕಾರ್ತಿಕ್ ಉತ್ತಮನಾಗಿದ್ದ. ಇದೇ ಆತ ಕಳ್ಳತನಕ್ಕಿಳಿಯಲು ಸಹಾಯ ಮಾಡಿತ್ತು. ಆದರೆ, ಕಾರ್ತಿಕ್ ಗೆಳತಿಯ ಸಹೋದರ ಕಾಲಿಕೆ ಇರಿದ್ದರಿಂದ ಮೊದಲಿನಂತೆ ಓಡಲು ಸಾಧ್ಯವಾಗುತ್ತಿರಲಿಲ್ಲ. ನಂತರ ಸಹಚರರನ್ನು ನೇಮಿಸಿಕೊಂಡಿದ್ದ ಈತ, ಅವರೊಂದಿಗೆ ಕಳ್ಳತನ ಮಾಡುತ್ತಿದ್ದ. ಬೀಗ ಹಾಕಿದ್ದ ಮನೆಗಳನ್ನು ಗುರಿಯಾಗಿಸಿಕೊಂಡು ರಾತ್ರಿ ವೇಳೆಯಲ್ಲಿ ಕಳ್ಳತನ ಮಾಡುತ್ತಿದ್ದ. ಕದ್ದ ಚಿನ್ನವನ್ನು ಗಿರವಿ ಇಟ್ಟು ಐಶಾರಾಮಿ ಜೀವನಕ್ಕಾಗಿ ಖರ್ಚು ಮಾಡುತ್ತಿದ್ದರು. ಈ ಸಂಬಂಧ ಕದ್ದ ಚಿನ್ನವನ್ನು ಗಿರವಿ ಇಟ್ಟುಕೊಳ್ಳುತ್ತಿದ್ದ ಫೈನಾನ್ಸ್ ಕಂಪನಿಗಳ ವಿರುದ್ಧವೂ ಇದೀಗ ಪೊಲೀಸರು ಕ್ರಮ ಕೈಗೊಳ್ಳುತ್ತಿದ್ದಾರೆ.

## ವಿಜಯನಗರ: ಹಂಪಿ ದೇವಸ್ಥಾನದ ಕಲ್ಲಿನ ಕಂಬ ವಿರೂಪ ಪ್ರಕರಣ; ಗುಮಾಸ್ತ ಅಮಾನತು



ವಿಜಯನಗರ: ಯುನೆಸ್ಕೋ ಪಾರಂಪರಿಕ ತಾಣವಾದ ಹಂಪಿಯಲ್ಲಿರುವ ಐತಿಹಾಸಿಕ ವಿರೂಪಾಕ್ಷ ದೇವಾಲಯದೊಳಗಿನ ಕಲ್ಲಿನ ಕಂಬವನ್ನು ವಿರೂಪಗೊಳಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಧಿಕಾರಿಗಳು ದೇವಾಲಯದ ಗುಮಾಸ್ತರನ್ನು ಅಮಾನತುಗೊಳಿಸಿದ್ದಾರೆ ಎಂದು ಮೂಲಗಳು ಮಂಗಳವಾರ ತಿಳಿಸಿವೆ.

ಇದಕ್ಕೂ ಮುನ್ನ ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ (ಎಎಸ್‌ಐ) ಅಧಿಕಾರಿಗಳು ದತ್ತಿ ಇಲಾಖೆಗೆ ನೋಟಿಸ್ ಜಾರಿ ಮಾಡಿ ಈ ಸಂಬಂಧ ವಿವರಣೆ ಕೇಳಿದ್ದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ದತ್ತಿ ಇಲಾಖೆ ಸಹಾಯಕ ಆಯುಕ್ತರು ಹಂಪಿ ದೇವಸ್ಥಾನದ ಗುಮಾಸ್ತರಾದ ಬಿ.ಜಿ. ಶ್ರೀನಿವಾಸ್ ಎಂಬುವವರನ್ನು ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಮೊಳೆ ಹೊಡೆಯುವ ಸಲುವಾಗಿ ಕಂಬವೊಂದರ ಮೇಲೆ ಕೊರೆಯುವ ಯಂತ್ರವನ್ನು ಬಳಸಲಾಗಿದೆ. ದೇವಾಲಯದ ಗರ್ಭಗುಡಿಯ ಬಳಿ ಎರಡು ಕಂಬಗಳ ನಡುವೆ ಗೇಟ್ ಜೋಡಿಸಲು ಮೊಳೆ ಹೊಡೆಯಲಾಗಿದೆ. ಆದರೆ, ಈ ಕಾಮಗಾರಿ ಕೈಗೆತ್ತಿಕೊಳ್ಳುವ ಮುನ್ನ ದತ್ತಿ ಇಲಾಖೆಯು ಎಎಸ್‌ಐನಿಂದ ಒಪ್ಪಿಗೆ ಪಡೆದಿರಲಿಲ್ಲ. ದತ್ತಿ ಇಲಾಖೆಗೆ ದೇವಸ್ಥಾನದಲ್ಲಿ ಪೂಜೆ ನೆರವೇರಿಸಲು ಮಾತ್ರ ಜವಾಬ್ದಾರಿ ವಹಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಹಂಪಿ ದೇವಸ್ಥಾನವು ಯುನೆಸ್ಕೋ ಪಾರಂಪರಿಕ ತಾಣಗಳ ಪಟ್ಟಿಗೆ ಸೇರಿರುವ ಕಾರಣ ಎಎಸ್‌ಐ ತಂಡವು ಈ ಹಾನಿಯನ್ನು ಗಮನಿಸಿದೆ. ಪಾರಂಪರಿಕ ಸ್ಮಾರಕಗಳಿಗೆ ಸಣ್ಣಪುಟ್ಟ ಹಾನಿಯಾದರೂ, ಅದನ್ನು ಗಂಭೀರವಾಗಿ ಪರಿಗಣಿಸಲಾಗುತ್ತದೆ ಎಂದು ಎಎಸ್‌ಐ ಅಧಿಕಾರಿಗಳು ತಿಳಿಸಿದ್ದಾರೆ. ಕಂಬವನ್ನು ವಿರೂಪಗೊಳಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಸ್ಥಳೀಯರು, ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದ್ದಾರೆ.

## ಬರ ಪರಿಹಾರ ನೀಡಲು ಸಿದ್ಧ, ಸರ್ಕಾರ ರೈತರ ಪರ ಇದೆ: ಸಚಿವ ಎನ್. ಚಲುವರಾಯಸ್ವಾಮಿ



ಹಲಗೂರು: ಬರ ಪರಿಹಾರ ನೀಡಲು ಸಿದ್ಧ ಎಂದು ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ.

ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಬಳಿ 18 ಸಾವಿರ ಕೋಟಿ ರೂ. ಬರ ಪರಿಹಾರ ಕೇಳಿದ್ದು, ತಕ್ಷಣವೇ ಮಂತ್ರಿ ಮಂಡಲದ ಸಭೆ ಕರೆದು ರಾಜ್ಯ ಸರ್ಕಾರವು ಸಮಸ್ತ ರೈತರ ಪರವಾಗಿ ನಿಲ್ಲಲಿದೆ' ಎಂದರು.

ರಾಜ್ಯದ ಜನತೆ 26 ಸಂಸದರನ್ನು ಗೆಲ್ಲಿಸಿರುವುದನ್ನು ಬಿಜೆಪಿ ಮರೆತಿದೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಬಹುಮತ ಪಡೆದು ಅಧಿಕಾರಕ್ಕೆ ಬಂದಿರುವುದನ್ನು ಬಿಜೆಪಿ ಸಹಿಸದೇ ಬರ ಪರಿಹಾರ ಅನುದಾನ ಬಿಡುಗಡೆ ಮಾಡುವುದಕ್ಕೆ ಹಿಂದೇಟು ಹಾಕುತ್ತಿದೆ' ಎಂದು ಆರೋಪಿಸಿದರು.

'ಸಂಪುಟ ಸಭೆಯಲ್ಲಿ ಮಂಜೂರಾತಿ ಪಡೆದು ಕೇಂದ್ರ ಸರ್ಕಾರಕ್ಕೆ ಬರ ಅಧ್ಯಯನ ವರದಿ ಸಲ್ಲಿಸಿದ್ದು, 226 ತಾಲ್ಲೂಕುಗಳಲ್ಲಿ 'ಬರ ಘೋಷಣೆ' ಮಾಡಲಾಗಿದೆ. ಹಲವು ಹಂತದ ಕೆಲಸಗಳು ಮುಗಿದಿದ್ದು, ಪರಿಹಾರ ನೀಡುವ ಹಂತದಲ್ಲಿದ್ದೇವೆ. ಕೇಂದ್ರ ಸರ್ಕಾರದ ಪರಿಹಾರ ಘೋಷಣೆಗಾಗಿ ಕಾಯುತ್ತಿದ್ದು, ರಾಜ್ಯದ ಜನರಿಗೆ ?75 ಸಾವಿರ ಕೋಟಿಯನ್ನು ವಿವಿಧ ರೀತಿಯಲ್ಲಿ ಪರಿಹಾರ ನೀಡಲು ಯೋಜನೆ ರೂಪಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರಿಗೆ ಹೆಚ್ಚು ಬೆಳೆ ಹಾನಿ ಪರಿಶೀಲನೆ ನಡೆಸಲು ಮುಖ್ಯಮಂತ್ರಿ ಸೂಚಿಸಿದ್ದು, ಈ ನಿಟ್ಟಿನಲ್ಲಿ ಇಂದು ಮಳವಳ್ಳಿ ಮತ್ತು ಮದ್ದೂರು ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ವಸ್ತು ಸ್ಥಿತಿಯ ವರದಿ ನೀಡಲಾಗುವುದು' ಎಂದರು.

ಬರ ಪರಿಹಾರ ಹಣ ದುರುಪಯೋಗ ಆಗಬಾರದು ಎಂದು ಈಗಾಗಲೇ ಬೆಳೆ ಸರ್ವೇ ಮಾಡಿದ್ದು, ಫಲಾನುಭವಿಗಳ ಖಾತೆ ಸಂಖ್ಯೆ ಸಂಗ್ರಹಿಸಿದ್ದು, ರೈತರ ಖಾತೆಗೆ ನೇರವಾಗಿ ವರ್ಗಾವಣೆಯಾಗಲಿದೆ ಎಂದು ಸ್ಪಷ್ಟಪಡಿಸಿದರು.

## ಮುಂದಿನ 5 ವರ್ಷದಲ್ಲಿ ಅನಿಮಿಯ ಮುಕ್ತ ಕರ್ನಾಟಕ

### ಅನಿಮಿಯ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮದಲ್ಲಿ ಸಚಿವರ ಭರವಸೆ




ಬೆಂಗಳೂರು: ರಾಜ್ಯದಲ್ಲಿ ರಕ್ತಹೀನತೆ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನಗರದ ಜ್ಞಾನಜ್ಯೋತಿ ಸಭಾಂಗಣದಲ್ಲಿ ಆಯೋಜಿಸಿದ್ದ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಅನಿಮಿಯ ಮುಕ್ತ ಪೌಷ್ಠಿಕ ಕರ್ನಾಟಕ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಿಳೆ ಮತ್ತು ಮಕ್ಕಳ ಆರೋಗ್ಯ ರಕ್ಷಣೆಗೆ ಹೆಚ್ಚು ಒತ್ತು ನೀಡಲಾಗುತ್ತಿದ್ದು, ಈಗಾಗಲೇ ಅದಕ್ಕೆ ಪೂರಕವಾದಂತಹ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ರಕ್ತ ಹೀನತೆ ಮಹಿಳೆ ಮತ್ತು ಮಕ್ಕಳನ್ನು ಕಾಡುತ್ತಿರವ ಬಹುದೊಡ್ಡ ಸಮಸ್ಯೆಯಾಗಿದ್ದು, ಇದರ ನಿವಾರಣೆಗಾಗಿ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸುವುದರ ಜೊತೆಗೆ ಯೋಜನೆಯ ಯಶಸ್ಸಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡಲಿದ್ದೇವೆ ಎಂದು ಸಚಿವರು ತಿಳಿಸಿದರು.

ಈ ಮೂಲಕ ಮುಂದಿನ ಐದು ವರ್ಷದಲ್ಲಿ ರಾಜ್ಯವನ್ನು ಅನಿಮಿಯ ಮುಕ್ತ ವಾಗಿಸಲು ಶ್ರಮಿಸುತ್ತೇವೆ ಎಂದರು. ಮಹಿಳೆಯರಿಗೆ ಆಹಾರದ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ. ಸಿರಿ ಧಾನ್ಯಗಳ ಬಳಕೆ ಹಾಗೂ ಅದರ ಉಪಯೋಗದ ಬಗ್ಗೆಯೂ ತಿಳಿಸಬೇಕಿದೆ. ಈ ನಿಟ್ಟಿನಲ್ಲಿ ಇದೊಂದು ಮಹತ್ವಪೂರ್ಣ ಯೋಜನೆಯಾಗಿದೆ ಎಂದು ಸಚಿವರು ಹೇಳಿದರು.

ರಾಜ್ಯದಲ್ಲಿ ಅನೀಮಿಯಾ ಕಡಿಮೆ ಮಾಡುವುದರ ಮೂಲಕ ತಾಯಂದಿರು ಮತ್ತು ಮಕ್ಕಳ ಪೌಷ್ಠಿಕಾಂಶದ ಸ್ಥಿತಿಯನ್ನು ಸುಧಾರಣೆ ಮಾಡಬೇಕಾಗಿರುವುದು ನಮ್ಮೆಲ್ಲರ ಹೊಣೆಯಾಗಿದೆ. ಈ ಕಾರ್ಯಕ್ರಮವು, ರಾಜ್ಯದಲ್ಲಿ ಪೌಷ್ಠಿಕಾಂಶದ ಸ್ಥಿತಿಯನ್ನು ಸುಧಾರಿಸಲು ಅಸ್ತಿತ್ವದಲ್ಲಿರುವ ಕಾರ್ಯಕ್ರಮಗಳನ್ನು ಒಟ್ಟುಗೂಡಿಸಲಿದೆ ಎಂದು ಸಚಿವರು ಹೇಳಿದರು.

ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ಬಿಡದಿಯಲ್ಲಿ ಟೊಯೊಟಾ ಕಿರ್ಲೋಸ್ಕರ್ 3,300 ಕೋಟಿ ಹೂಡಿಕೆ: 2 ಸಾವಿರ ಉದ್ಯೋಗ ಸೃಷ್ಟಿ ಭರವಸೆ

ಬೆಂಗಳೂರು: ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಕಂಪನಿಯು ಬಿಡದಿಯಲ್ಲಿ 3,300 ಕೋಟಿ ರೂ. ವೆಚ್ಚದಲ್ಲಿ ತನ್ನ ಮೂರನೇ ಕಾರು ಉತ್ಪಾದನಾ ಘಟಕವನ್ನು ಆರಂಭಿಸಲಿದ್ದು, ಈ ಸಂಬಂಧ ರಾಜ್ಯ ಸರ್ಕಾರ ಮತ್ತು ಕಂಪನಿ ಮಂಗಳವಾರ ಒಡಂಬಡಿಕೆಗೆ ಸಹಿ ಮಾಡಿದೆ.

ಒಡಂಬಡಿಕೆ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಉಪಸ್ಥಿತರಿದ್ದರು. ಸರ್ಕಾರದ ಪರವಾಗಿ ಕೈಗಾರಿಕಾ ಇಲಾಖೆಯ ಆಯುಕ್ತೆ ಗುಂಜನ್ ಕೃಷ್ಣ ಮತ್ತು ಟೊಯೋಟಾ ಪರವಾಗಿ ಕಂಪನಿಯ ಉಪಾಧ್ಯಕ್ಷ ಸುದೀಪ್ ದಳವಿ ಅಂಕಿತ ಹಾಕಿ, ಒಡಂಬಡಿಕೆ ಪತ್ರವನ್ನು ವಿನಿಮಯ ಮಾಡಿಕೊಂಡರು.

ಬಳಿಕ ಮಾತನಾಡಿದ ಸಚಿವ ಪಾಟೀಲ್ ಅವರು, ಟೊಯೋಟಾ ರಾಜ್ಯದಲ್ಲಿ ನೆಲೆಯೂರಿ 25 ವರ್ಷಗಳು ತುಂಬಿವೆ. ಈ ಸಂದರ್ಭದಲ್ಲೇ ಕಂಪನಿಯು ನೂತನ ಉತ್ಪಾದನಾ ಘಟಕ ಸ್ಥಾಪನೆಗೆ ಮುಂದಾಗಿರುವುದು ಸ್ವಾಗತಾರ್ಹವಾಗಿದೆ. ಇದರಿಂದ ಸ್ಥಳೀಯ ಮಟ್ಟದಲ್ಲಿ ಉತ್ಪಾದನಾ ಚಟುವಟಿಕೆಗಳಿಗೆ ಉತ್ತೇಜನ ಸಿಗಲಿದ್ದು, ನೂತನ ತಂತ್ರಜ್ಞಾನಾಧಾರಿತ ಕಾರುಗಳು ಎಲ್ಲರಿಗೂ ಸುಲಭವಾಗಿ ಲಭ್ಯವಾಗಲಿವೆ' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿದ್ಯುತ್ ಚಾಲಿತ ವಾಹನಗಳ ತಯಾರಿಕೆ ಮೇಲೆ 25 ಸಾವಿರ ಕೋಟಿ ರು. ಬಂಡವಾಳ ಹೂಡಿಕೆ ಆಕರ್ಷಿಸಲಾಗಿದೆ. 50 ಸಾವಿರ ಕೋಟಿ ಹೂಡಿಕೆ ಆಕರ್ಷಿಸುವ ಗುರಿ ಇದೆ.



ರಾಜ್ಯದಲ್ಲಿ 2 ಲಕ್ಷ ವಾಹನಗಳು (ಇವಿ) ನೋಂದಣಿಯಾಗಿವೆ. ಇವಿ ವಾಹನಗಳ ಉತ್ಪಾದನೆಯಲ್ಲಿ ಕರ್ನಾಟಕವನ್ನು ಪ್ರಮುಖ ತಾಣವಾಗಿಸಲು ಹೊಸ ಶುದ್ಧ ಸಂಚಾರ (ಕ್ಲೀನ್ ಮೊಬಿಲಿಟಿ) ನೀತಿಯನ್ನು ರಾಜ್ಯ ಸರ್ಕಾರ ಹೊರತರಲಿದೆ ಎಂದರು.

ಟೊಯೋಟಾ ಕಂಪನಿಯ ಎರಡು ಉತ್ಪಾದನಾ ಘಟಕಗಳು ಈಗಾಗಲೇ ಬಿಡದಿಯಲ್ಲಿ ಸಕ್ರಿಯವಾಗಿವೆ. ಉದ್ದೇಶಿತ ಮೂರನೇ ಘಟಕದಲ್ಲಿ ವರ್ಷಕ್ಕೆ ಹೆಚ್ಚುವರಿಯಾಗಿ 1 ಲಕ್ಷ ಕಾರುಗಳನ್ನು ಉತ್ಪಾದಿಸುವ ಸಾಮರ್ಥ್ಯವಿದ್ದು, ಇದರಿಂದ ಅಂದಾಜು 2 ಸಾವಿರ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದರು.

ಸರ್ಕಾರವು ಕೈಗಾರಿಕಾ ರಂಗದ ಬೆಳವಣಿಗೆಗೆ ಆದ್ಯ ಗಮನ ಕೊಟ್ಟಿದ್ದು, ವಿದ್ಯುತ್ ಚಾಲಿತ ವಾಹನಗಳ ವಲಯ ಸೇರಿದಂತೆ ಒಟ್ಟು 9 ವಲಯಗಳಿಗೆ ಅನ್ವಯವಾಗುವಂತೆ ವಿಷನ್ ಗ್ರೂಪ್‌ಗಳನ್ನು ರಚಿಸಿದೆ. ಇವುಗಳಲ್ಲಿ ಗಣ್ಯ ಉದ್ಯಮಿಗಳೇ ಇದ್ದು, ರಾಜ್ಯಕ್ಕೆ ಬಂಡವಾಳ ಹೂಡಿಕೆಯನ್ನು ಆಕರ್ಷಿಲಾಗುವುದು. ಜತೆಗೆ ಕರ್ನಾಟಕ ಇನ್ವೆಸ್ಟ್‌ಮೆಂಟ್ ಫೋರಂ ಮತ್ತು ಸ್ಟ್ರಾಟೆಜಿಕ್ ಇನ್ವೆಸ್ಟ್‌ಮೆಂಟ್ ಫೋರಂ ಎರಡಕ್ಕೂ ಹೊಸ ರೂಪ ನೀಡಲಾಗಿದೆ ಎಂದು ವಿವರಿಸಿದರು.

ನಾವು ಇಂಧನ ಭದ್ರತೆಯನ್ನು ಸುಧಾರಿಸುವ ಮೂಲಕ, ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವ ಮತ್ತು ಕಾರ್ಬನ್ ನ್ಯೂಟ್ರಾಲಿಟಿಯನ್ನು ಸಾಧಿಸುವ ಮೂಲಕ ಭಾರತಕ್ಕೆ ಉತ್ತಮ ಪರಿಹಾರಗಳನ್ನು, ವಿಶ್ವ ದರ್ಜೆಯ ಸ್ಥಳೀಯ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುತ್ತೇವೆ ಎಂದು ಯೋಶಿಮುರಾ ಹೇಳಿದರು.

## ಪ್ರಯಾಣಿಕರಿಗೆ ಅನಾನುಕೂಲ: ಮತ್ತೆ ಏರ್ ಇಂಡಿಯಾಗೆ 10 ಲಕ್ಷ ರೂಪಾಯಿ ದಂಡ ವಿಧಿಸಿದ ಡಿಜಿಸಿಎ



ನವದೆಹಲಿ: ಪ್ರಯಾಣಿಕರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಸಂಬಂಧ ಮಾನದಂಡಗಳನ್ನು ಅನುಸರಿಸದ ಏರ್ ಇಂಡಿಯಾಕ್ಕೆ ವಿಮಾನಯಾನ ವಲಯದ ನಿಯಂತ್ರಕ (ಡಿಜಿಸಿಎ) 10 ಲಕ್ಷ ರೂಪಾಯಿ ದಂಡ ವಿಧಿಸಿದೆ.

ದೆಹಲಿ, ಕೊಚ್ಚಿ ಮತ್ತು ಬೆಂಗಳೂರು ವಿಮಾನ ನಿಲ್ದಾಣಗಳಲ್ಲಿನ ಏರ್ ಇಂಡಿಯಾ ಘಟಕಗಳನ್ನು ಪರಿಶೀಲಿಸಿದ ನಂತರ, ವಿಮಾನಯಾನ ಸಂಸ್ಥೆಯು ನಾಗರಿಕ ವಿಮಾನಯಾನ ನಿಬಂಧನೆಗಳನ್ನು (ಸಿಎಆರ್) ಸರಿಯಾಗಿ ಅನುಸರಿಸುತ್ತಿಲ್ಲ ಎಂದು ಕಂಡುಬಂದಿದೆ ಎಂದು ನಾಗರಿಕ ವಿಮಾನಯಾನ ನಿರ್ದೇಶನಾಲಯ (ಡಿಜಿಸಿಎ) ಹೇಳಿಕೆಯಲ್ಲಿ ತಿಳಿಸಿದೆ.

ಈ ಹಿನ್ನೆಲೆಯಲ್ಲಿ ನವೆಂಬರ್ 3ರಂದು ನಿಯಂತ್ರಕದಿಂದ ಏರ್ ಇಂಡಿಯಾಗೆ ಶೋಕಾಸ್ ನೋಟಿಸ್ ಕೂಡ ಜಾರಿ ಮಾಡಿದೆ.

ನೋಟಿಸ್‌ಗೆ ಏರ್ ಇಂಡಿಯಾದಿಂದ ಬಂದ ಪ್ರತಿಕ್ರಿಯೆಯನ್ನು ಆಧರಿಸಿ, ಪ್ರಯಾಣಿಕರಿಗೆ ಸೌಲಭ್ಯಗಳನ್ನು ಒದಗಿಸುವ ಮಾನದಂಡಗಳಿಗೆ ಸಂಬಂಧಿಸಿದ ಸಿಎಆರ್ ಅನ್ನು ಅದು ಅನುಸರಿಸುತ್ತಿಲ್ಲ ಎಂದು ಕಂಡುಬಂದಿದೆ ಎಂದು ಡಿಜಿಸಿಎ ಹೇಳಿದೆ. ಈ ಹಿನ್ನೆಲೆಯಲ್ಲಿ ವಿಮಾನಯಾನ ಸಂಸ್ಥೆಗೆ 10 ಲಕ್ಷ ದಂಡ ವಿಧಿಸಲಾಗಿದೆ.

ತಮ್ಮ ವಿಮಾನಗಳು ವಿಳಂಬವಾದಾಗ ಪ್ರಯಾಣಿಕರಿಗೆ ಹೋಟೆಲ್ ಸೌಕರ್ಯಗಳು, ಅಂತಾರಾಷ್ಟ್ರೀಯ ವಿಮಾನಗಳಲ್ಲಿ ಆರಾಮದಾಯಕ ಆಸನಗಳನ್ನು ಪಡೆಯದ ಪ್ರಯಾಣಿಕರಿಗೆ ಪರಿಹಾರ ಮತ್ತು ನೆಲದ ಸಿಬ್ಬಂದಿಯ ಸರಿಯಾದ ತರಬೇತಿಗೆ ಸಂಬಂಧಿಸಿದ ಮಾನದಂಡಗಳಿಗೆ ಏರ್ ಇಂಡಿಯಾ ಗಮನ ನೀಡುತ್ತಿಲ್ಲ ಎಂಬ ಆರೋಪವಿದೆ.

## ಭಗವದ್ಗೀತೆ ಅಭಿಯಾನ ಯಶಸ್ವಿಗೊಳಿಸಲಾಗುವುದು: ಡಾ.ಪ್ರಭಾಕರ ಕೋರೆ

ಬೆಳಗಾವಿ: ಬೆಳಗಾವಿ ಕೇಂದ್ರಿತವಾಗಿ ಆರಂಭವಾಗಿರುವ ಭಗವದ್ಗೀತೆ ಅಭಿಯಾನವನ್ನು ಯಶಸ್ವಿಗೊಳಿಸಲಾಗುವುದು ಎಂದು ಅಭಿಯಾನದ ರಾಜ್ಯ ಸಮಿತಿಯ ಗೌರವಾಧ್ಯಕ್ಷ, ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ.ಪ್ರಭಾಕರ ಕೋರೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಕಳೆದ 17 ವರ್ಷಗಳಿಂದ ರಾಜ್ಯಾದ್ಯಂತ ಭಗವದ್ಗೀತೆ ಅಭಿಯಾನ ನಡೆಸುತ್ತಿರುವ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಶ್ರೀ ಗಂಗಾಧರೇಂದ್ರ ಸರಸ್ವತಿ ಸ್ವಾಮಿಗಳೊಂದಿಗೆ ಮಂಗಳವಾರ ಸಂಜೆ ಬೆಳಗಾವಿಯಲ್ಲಿ



ಚರ್ಚಿಸಿದ ಅವರು, ಅಭಿಯಾನ ಯಾವುದೇ ವಿಘ್ನಗಳಿಲ್ಲದೆ ಯಶಸ್ವಾಗಿ ನಡೆಯಲಿದೆ. ಇದಕ್ಕೆ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ಸ್ವಾಮೀಜಿಗಳ ಮಾರ್ಗ ದರ್ಶನದಂತೆ ಶ್ಲೋಕ ಪಠಣ, ಪ್ರವಚನ, ವಿಚಾರಸಂಕಿರಣ, ಗೀತಾ ಸಮನ್ವಯ ಕಾರ್ಯಕ್ರಮ ಹಾಗೂ ಮಹಾಸಮರ್ಪಣೆ ಸೇರಿದಂತೆ ಎಲ್ಲ ಕಾರ್ಯಕ್ರಮಗಳನ್ನು ಸುವ್ಯವಸ್ಥಿತ ವಾಗಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಭಗವದ್ಗೀತೆ ಅಭಿಯಾನದ ಯಶಸ್ಸಿಗೆ ನಮ್ಮ ಸಂಪೂರ್ಣ ತಂಡ ಕೆಲಸ ಮಾಡಲಿದೆ. ಬೆಳಗಾವಿ ಜಿಲ್ಲೆಯಾದ್ಯಂತ ಶ್ಲೋಕ ಕೇಂದ್ರಗಳನ್ನು ಆರಂಭಿಸಲಾಗುವುದು. ಜಿಲ್ಲೆಯಾದ್ಯಂತ ಉತ್ತಮ ಸ್ಪಂದನೆ ಸಿಗುತ್ತಿದೆ ಎಂದು ಅವರು ತಿಳಿಸಿದರು.

ಭಗವದ್ಗೀತೆ ಅಭಿಯಾನ ಸಮಿತಿ ಕಾರ್ಯಾಧ್ಯಕ್ಷ ಪರಮೇಶ್ವರ ಹೆಗಡೆ, ಕಾರ್ಯದರ್ಶಿ ಎಂ.ಕೆ. ಹೆಗಡೆ, ಸಂಚಾಲಕ ಸುಬ್ರಹ್ಮಣ್ಯ ಭಟ್ ಮೊದಲಾದವರು ಇದ್ದರು.

## ಠಾಣೆಯಿಂದ ತಪ್ಪಿಸಿಕೊಂಡ ಯುವಕ: ವಿಚಾರಣೆಗೆ ಹೆದರಿ ಆತ್ಮಹತ್ಯೆ; ಇಬ್ಬರು ಪೊಲೀಸ್ ಸಿಬ್ಬಂದಿ ಸಸ್ಪೆಂಡ್

ಮೈಸೂರು : ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕು ಬಿಳಿಗೆರೆ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.



ಅಮಾನತಾಗಿರುವ ಸಿಬ್ಬಂದಿ ಹೆಡ್ ಕಾನ್ಸ್ಟೇಬಲ್ ನಂಜೇಶ್ ಹಾಗೂ ಕಾನ್ಸ್ಟೇಬಲ್ ಪ್ರಸನ್ನ ಕುಮಾರ್ ಎಂದು ತಿಳಿದುಬಂದಿದೆ.

ಪ್ರಕರಣದ ಹಿನ್ನೆಲೆ :

ಗಲಾಟೆ ವಿಚಾರದಲ್ಲಿ ಬಿಳಿಗೆರೆ ಠಾಣೆಯ ಎಸ್‌ಐ, ಇಬ್ಬರು ಆರೋಪಿಗಳನ್ನು ಠಾಣೆಗೆ ಕರೆತಂದಿದ್ದರು. ಮತ್ತೊಬ್ಬ ಆರೋಪಿಯನ್ನು ವಶಕ್ಕೆ ಪಡೆಯಲು ಹೋಗಿದ್ದರು. ಈ ವೇಳೆ ಕರ್ತವ್ಯದಲ್ಲಿದ್ದ ಇಬ್ಬರು ಆರೋಪಿಗಳ ಜವಾಬ್ದಾರಿ ನಂಜೇಶ್ ಹಾಗೂ ಪ್ರಸನ್ನ ಕುಮಾರ್ ಅವರು ನಿಭಾಯಿಸಬೇಕಿತ್ತು.

ಇಬ್ಬರು ಆರೋಪಿಗಳ ಪೈಕಿ ನಗರ್ಲೆ ಗ್ರಾಮದ ಕಿರಣ್ ಕುಮಾರ್ (22) ಠಾಣೆಯಿಂದ ತಪ್ಪಿಸಿಕೊಂಡು ಎಸ್ಕೇಪ್ ಆಗಿದ್ದ. ಅಲ್ಲದೆ ಪೊಲೀಸರ ವಿಚಾರಣೆಗೆ ಹೆದರಿ ಆತ್ಮಹತ್ಯೆಗೆ ಯತ್ನಿಸಿದ್ದ. ಬಳಿಕ ಆತನನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಚಿಕಿತ್ಸೆ ಫಲಕಾರಿಯಾಗದೆ ಕಿರಣ್ ಕುಮಾರ್ ಸಾವನ್ನಪ್ಪಿದ್ದ. ಈ ಪ್ರಕರಣದಲ್ಲಿ ಕರ್ತವ್ಯಲೋಪ ಎಸಗಿದ ಇಬ್ಬರು ಸಿಬ್ಬಂದಿಯನ್ನು ಇಲಾಖಾ ವಿಚಾರಣೆಗೆ ಆದೇಶಿಸಿ ಸಸ್ಪೆಂಡ್ ಮಾಡಲಾಗಿದೆ.

## ಕಲಬುರಗಿ: ಹಿರಿಯ ಮಹಿಳಾ ಜ್ಯೋತಿಷಿಯೊಬ್ಬರ ಹತ್ಯೆ; ಕೊಲೆಗೂ ಮುನ್ನ ಅತ್ಯಾಚಾರ ನಡೆದಿರುವ ಶಂಕೆ



ಕಲಬುರಗಿ: ಕಲಬುರಗಿ ಜಿಲ್ಲೆಯಲ್ಲಿ ಹಿರಿಯ ಮಹಿಳಾ ಜ್ಯೋತಿಷಿಯೊಬ್ಬರನ್ನು ಕೊಚ್ಚಿ ಹತ್ಯೆ ಮಾಡಲಾಗಿದ್ದು, ಕೊಲೆ ಮಾಡುವ ಮುನ್ನ ಆಕೆಯ ಮೇಲೆ ಅತ್ಯಾಚಾರ ಎಸಗಲಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ.

ಸಂತ್ರಸ್ತೆಯನ್ನು 65 ವರ್ಷದ ರತ್ನಾ ಬಾಯಿ ಎಂದು ಗುರುತಿಸಲಾಗಿದ್ದು, ಮಂಗಳವಾರ ತಡರಾತ್ರಿ ಕಲಬುರಗಿ ನಗರದ ಸಂತೋಷ ಕಾಲೋನಿಯಲ್ಲಿ ಈ ಘಟನೆ ನಡೆದಿದೆ.

ಸಂತ್ರಸ್ತೆ ಶೆಡ್‌ನಲ್ಲಿ ಒಂಟಿಯಾಗಿ ವಾಸವಾಗಿದ್ದು, ಆಕೆಯನ್ನು ಹರಿತವಾದ ಆಯುಧದಿಂದ ಕೊಚ್ಚಿ ಕೊಲೆ ಮಾಡಲಾಗಿದೆ ಎಂದು ಆರ್‌ಜೆ ನಗರ ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ತನಿಖೆ ಕೈಗೊಂಡಿದ್ದಾರೆ.

ಒಂದಕ್ಕಿಂತ ಹೆಚ್ಚು ವ್ಯಕ್ತಿಗಳು ಈ ಕೃತ್ಯ ಎಸಗಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ. ಆಕೆಗೆ ಪರಿಚಯವಿರುವ ವ್ಯಕ್ತಿಗಳೇ ಈ ಕೃತ್ಯ ಎಸಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

## ಹೆಂಡತಿ ಮೇಲೆ ಸಂಶಯ; ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ ಪತಿ ಅರೆಸ್ಟ್

ಬೆಂಗಳೂರು: ಅನುಮಾನ ಪಿಶಾಚಿ ಗಂಡನೊಬ್ಬ ಹೆಂಡತಿ ಮೇಲೆ ಪೆಟ್ರೋಲ್ ಎರಚಿ ಬೆಂಕಿ ಹಚ್ಚಿದ ಘಟನೆ ಬೆಂಗಳೂರಿನ ಕದಿರೇನಹಳ್ಳಿಯಲ್ಲಿ ನಡೆದಿದೆ. ಶ್ರೀನಿವಾಸ್ ಎಂಬಾತ ಪತ್ನಿ ಪುಷ್ಪಮ್ಮ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ. ಕಳೆದ ನವೆಂಬರ್ 16ರಂದು ನಡೆದಿದ್ದ ಘಟನೆಯು ತಡವಾಗಿ ಬೆಳಕಿಗೆ ಬಂದಿದೆ.



ಶ್ರೀನಿವಾಸ್ ಹಾಗೂ ಪುಷ್ಪಮ್ಮ ಕಳೆದ 18 ವರ್ಷದ ಹಿಂದೆ ಮದುವೆಯಾಗಿದ್ದರು. ಪ್ಲಂಬರ್ ಕೆಲಸ ಮಾಡಿಕೊಂಡಿದ್ದ ಶ್ರೀನಿವಾಸ್‌ಗೆ ಪತ್ನಿ ಪುಷ್ಪಳ ಶೀಲ ಶಂಕಿಸಿ ಆಗಾಗ ಗಲಾಟೆ ಮಾಡುತ್ತಿದ್ದ. ಈ ಬಗ್ಗೆ ಹಿರಿಯರು ಅನೇಕ ಬಾರಿ ರಾಜಿ ಪಂಚಾಯಿತಿ ಮಾಡಿದ್ದರು.

ಬಂಧಿತ ಆರೋಪಿ ಆದರೆ ಪತ್ನಿ ಮೇಲಿನ ಅನುಮಾನ ಮಾತ್ರ ಕಡಿಮೆ ಆಗಿರಲಿಲ್ಲ. ನಿತ್ಯವು ಜಗಳ ತೆಗೆದು ಕಿರುಕುಳ ನೀಡುತ್ತಿದ್ದ. ಈ ನಡುವೆ ಕಳೆದ 16ರಂದು ಇದೇ ವಿಷಯಕ್ಕೆ ದಂಪತಿ ನಡುವೆ ಗಲಾಟೆ ಶುರುವಾಗಿದೆ. ಸಿಟ್ಟಿಗೆದ್ದ ಶ್ರೀನಿವಾಸ್ ಪತ್ನಿ ಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾನೆ.

ಆಕೆ ಕಿರುಚಾಡುತ್ತಿದ್ದಂತೆ ಗಾಬರಿಯಾದ ಶ್ರೀನಿವಾಸ್ ನೀರು ಸುರಿದಿದ್ದಾನೆ. ಬಳಿಕ ಪುಷ್ಪಮ್ಮಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲು ಮಾಡಿದ್ದಾನೆ. ಪುಷ್ಪಳಿಗೆ ಚಿಕಿತ್ಸೆ ಮುಂದುವರಿದಿದ್ದು, ಆರೋಪಿ ಶ್ರೀನಿವಾಸ್‌ನನ್ನು ಬನಶಂಕರಿ ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ.

## ಗ್ರಾಮವನ್ನೇ ಮಾರಿದ ಗ್ರಾಪಂ ಪಿಡಿಓ ಅಮಾನತು

ಚಿಕ್ಕಬಳ್ಳಾಪುರ: ಬಾರ್ಲಹಳ್ಳಿ ಗ್ರಾಮವನ್ನು ನಿವೇಶನಗಳನ್ನಾಗಿ ವಿಂಗಡಿಸಿ ಮಾರಾಟ ಮಾಡಿದ್ದ ಪ್ರಕರಣದಲ್ಲಿ ಗ್ರಾಮ ಪಂಚಾಯ್ತಿ ಕಆಔ ಎಂ.ಸಿ. ವೆಂಕಟೇಶ ಅವರನ್ನು ಅಮಾನತು ಮಾಡಿ ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತಿ CEO ಪ್ರಕಾಶ ಜೆ. ನಿಟ್ಟಾಲಿ ಆದೇಶ ಹೊರಡಿಸಿದ್ದಾರೆ.

ಅಮಾನತುಗೊಂಡ ಅಧಿಕಾರಿ ಎಂ.ಸಿ. ವೆಂಕಟೇಶ ಅವಲಗುರ್ಕಿ ಗ್ರಾಮ ಪಂಚಾಯತಿ ಪಿ.ಡಿ.ಓ. ಆಗಿದ್ದರು. ಪ್ರಸ್ತುತ ವೆಂಕಟೇಶ, ಹಾರೋಬಂಡೆ ಗ್ರಾಮ ಪಂಚಾಯತಿ ಪಿಡಿಓ ಆಗಿ ವರ್ಗಾವಣೆ ಆಗಿದ್ದರು.

ಅವಲಗುರ್ಕಿ PDO ಆಗಿದ್ದಾಗ ಬಾರ್ಲಹಳ್ಳಿ ಗ್ರಾಮವನ್ನೆ ಇವರು ಮಾರಾಟ ಮಾಡಿದ್ದರು.

ಗ್ರಾಮ ಪಂಚಾಯತಿ ಜನಪ್ರತಿನಿದಿಗಳ ಜೊತೆ ಶಾಮೀಲು ಆಗಿ ಅಕ್ರಮ ಕೆಲಸ ಎಸಗಿದ್ದಾರೆ ಎಂಬುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅಇಔ ಪ್ರಕಾಶ ಜೆ. ನಿಟ್ಟಾಲಿ ತಿಳಿಸಿದ್ದಾರೆ.

### ಡಿಸೆಂಬರ್ ಒಳಗೆ ಎಲ್ಲ ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮೀ ಹಣ ತಲುಪಿಸಲು ಸಿಎಂ, ಸಚಿವರ ಸೂಚನೆ

## ಗೃಹಲಕ್ಷ್ಮೀ ಅದಾಲತ್ ಮೂಲಕ ಸಮಸ್ಯೆ ಪರಿಹರಿಸಲು ಸಲಹೆ

ಬೆಂಗಳೂರು: ಡಿಸೆಂಬರ್ ಒಳಗೆ ಎಲ್ಲ ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮೀ ಯೋಜನೆಯ ನಗದು ವರ್ಗಾವಣೆಯನ್ನು ಖಾತರಿ ಪಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಉಪಸ್ಥಿತಿಯಲ್ಲಿ ಬುಧವಾರ ಗೃಹ ಲಕ್ಷ್ಮಿ ಯೋಜನೆಯ ಪ್ರಗತಿ ಪರಿಶೀಲನೆ ಸಭೆ ನಡೆಯಿತು. ಗೃಹಲಕ್ಷ್ಮಿ ಫಲಾನುಭವಿಗಳು ಬಿಟ್ಟು ಹೋಗಿದ್ದಲ್ಲಿ ಅಥವಾ ಬ್ಯಾಂಕ್ ಖಾತೆ ಆಧಾರ್ ಲಿಂಕ್ ಮತ್ತಿತರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗೃಹ ಲಕ್ಷ್ಮಿ ಅದಾಲತ್ ಆಯೋಜಿಸಿ, ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.



ನವೆಂಬರ್ ತನಕ 1.17 ಕೋಟಿ ಫಲಾನುಭವಿಗಳು ನೋಂದಣಿಯಾಗಿದ್ದು, 1.10 ಕೋಟಿ ಫಲಾನುಭವಿಗಳಿಗೆ ನೆರವು ವರ್ಗಾವಣೆ ಮಾಡಲಾಗಿದೆ. 2 ಲಕ್ಷ ಫಲಾನುಭವಿಗಳಿಗೆ ಸಂಬಂಧಿಸಿದ ತೊಡಕು ನಿವಾರಿಸಲಾಗುತ್ತಿದೆ. ಖಾತೆಯ ಮಾಹಿತಿಯಲ್ಲಿ ಗೊಂದಲ, ಆಧಾರ್ ಲಿಂಕ್ ಆಗದಿರುವುದು ಮೊದಲಾದ ಕಾರಣಗಳಿಂದ ಹಣ ವರ್ಗಾವಣೆಗೆ ತೊಡಕಾಗಿದೆ. ಅಂಗನವಾಡಿ ಕಾರ್ಯಕರ್ತೆಯರು ಫಲಾನುಭವಿಗಳನ್ನು ಬ್ಯಾಂಕಿಗೇ ಕರೆದೊಯ್ದು ಸಮಸ್ಯೆ ಬಗೆಹರಿಸಲಾಗುತ್ತಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹಾಗೂ ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ಕೆಲವೇ ದಿನಗಳಲ್ಲಿ ಈ ಪ್ರಕ್ರಿಯೆ ಪೂರ್ಣಗೊಳಿಸಿ, ಎಲ್ಲ ಅರ್ಹ ಫಲಾನುಭವಿಗಳಿಗೆ ನೆರವು ಕ್ರಮ ಕೈಗೊಳ್ಳಲು ಸಿಎಂ ಸೂಚಿಸಿದರು.

ಸಭೆಯಲ್ಲಿ ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಕೆ.ಗೋವಿಂದರಾಜು, ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯೆಲ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಅಭಿವೃದ್ಧಿ ಆಯುಕ್ತೆ ಡಾ : ಶಾಲಿನಿ ರಜನೀಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ಡಿ.ಸಿ.ಪ್ರಕಾಶ್ ನಿರ್ದೇಶಕಿ ಎಂ.ಎಸ್. ಅರ್ಚನಾ ಮತ್ತು ಇತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಒಕ್ಕಲಿಗರ ಸಂಘ ಸಲ್ಲಿಸಿದ ಮನವಿಗೆ ನಾನು ಸಹಿ ಮಾಡಬಾರದೇ? ಮಾಡಿದರೆ ತಪ್ಪೇನು?: ಡಿಕೆ.ಶಿವಕುಮಾರ್

ಬೆಂಗಳೂರು: ಒಕ್ಕಲಿಗರ ಸಂಘ ಸಲ್ಲಿಸಿದ ಮನವಿಗೆ ನಾನು ಸಹಿ ಮಾಡಬಾರದೇ? ಮಾಡಿದರೆ ತಪ್ಪೇನು? ಅದು ನಮ್ಮ ಸಮಾಜದ ನಿರ್ಣಯ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬುಧವಾರ ಹೇಳಿದ್ದಾರೆ.



ಕಾಂತರಾಜು ಅವರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ವರದಿಯನ್ನು ಸರ್ಕಾರ ಸ್ವೀಕಾರ ಮಾಡದಂತೆ ಸಹಿ ಹಾಕಿದ ವಿಚಾರಕ್ಕೆ ಸಂಬಂಧಿಸಿದಂತೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿರುವ ಅವರು, ನಮ್ಮ ಸಮಾಜದ ನಿರ್ಣಯ ಬೇರೆ, ರಾಜಕೀಯ ಬೇರೆ. ನಾನು ಮತ್ತು ಸಚಿವರು ಸಭೆಯಲ್ಲಿ ಭಾಗವಹಿಸಿದ್ದೇವೆ. ಜನಸಂಖ್ಯೆ ಆಧಾರದಲ್ಲಿ ಮೀಸಲಾತಿ ಸಿಗಬೇಕು ಎಂದು ಅನೇಕ ಸಮುದಾಯಗಳು ಆಗ್ರಹಿಸಿವೆ. ಪರಿಶಿಷ್ಟರು, ಪಂಚಮಸಾಲಿ, ವೀರಶೈವರು, ಒಕ್ಕಲಿಗರು ಸೇರಿದಂತೆ ಹಲವರು ಹೋರಾಟ ಮಾಡುತ್ತಿದ್ದಾರೆ. ಈ ಹೋರಾಟದಲ್ಲಿ ಪಕ್ಷಬೇಧ ಮರೆತು ಹೋರಾಟ ಮಾಡಲಾಗುತ್ತಿದೆ. ಕೆಲ ಸಮುದಾಯ ಹಾಗೂ ಅದರ ನಾಯಕರು ಜಾತಿ ಗಣತಿ ಸಮೀಕ್ಷೆ ವೇಳೆ ನಮ್ಮನ್ನು ಸಂಪರ್ಕಿಸಿಲ್ಲ. ಹೀಗಾಗಿ ಸಮೀಕ್ಷೆಯನ್ನು ವೈಜ್ಞಾನಿಕವಾಗಿ ಮಾಡಬೇಕು ಎಂದು ಕೇಳುತ್ತಿದ್ದಾರೆಂದು ಹೇಳಿದರು.

ಒಕ್ಕಲಿಗರ ಸಂಘ ಸಲ್ಲಿಸಿದ ಮನವಿ ಪತ್ರಕ್ಕೆ ನಾನು ಸಹಿ ಮಾಡಬಾರದೇ? ಎಷ್ಟು ಜನ ಸಚಿವರು ಈ ವಿಚಾರದಲ್ಲಿ ಸಭೆ ಮಾಡಿಲ್ಲ? ಅದೇ ರೀತಿ ನಾನು ರಾಜಕೀಯ ಪಕ್ಕಕ್ಕಿಟ್ಟು ನಮ್ಮ ಸಮಾಜ, ಅದರ ಗೌರವ, ಅಭಿಮಾನ ಉಳಿಸಿಕೊಳ್ಳಬೇಕು ಎಂದು ಸಭೆಯಲ್ಲಿ ಭಾಗವಹಿಸಿದ್ದೇನೆ. ಇದು ಎಲ್ಲ ನಾಯಕರಲ್ಲೂ ಇರುತ್ತದೆ' ಎಂದು ತಿಳಿಸಿದರು.

ನಿಗಮ ಮಂಡಳಿಗಳಿಗೆ ನೇಮಕ ವಿಚಾರವಾಗಿ ಪ್ರತಿಕ್ರಿಯಿಸಿ, ಚರ್ಚೆ ಮಾಡುತ್ತಿದ್ದೇವೆ. ಹಿರಿಯ ನಾಯಕರು, ಶಾಸಕರ ಅಭಿಪ್ರಾಯವನ್ನು ಪಡೆಯುತ್ತಿದ್ದೇವೆ. ನಾನು ಮತ್ತು ಮುಖ್ಯಮಂತ್ರಿ ತೆಲಂಗಾಣ ವಿಧಾನಸಭೆ ಚುನಾವಣೆ ಪ್ರಚಾರಕ್ಕೆ ಹೋಗಬೇಕಿದೆ. 28ರಂದು ನಮ್ಮ ದೆಹಲಿ ನಾಯಕರು ಮತ್ತೆ ರಾಜ್ಯಕ್ಕೆ ಬರುತ್ತಿದ್ದು, ಆ ಸಭೆ ಬಳಿಕ ಹೈಕಮಾಂಡ್ ನಾಯಕರಿಗೆ ಪಟ್ಟಿ ಕಳುಹಿಸುತ್ತೇವೆ' ಎಂದರು.

ಇದೇ ವೇಳೆ ನಿಗಮ ಮಂಡಳಿ ನೇಮಕ ವಿಳಂಬ ಮಾಡುತ್ತಿರುವುದು ಕಲೆಕ್ಷನ್‌ಗಾಗಿ ಎಂಬ ಬಿಜೆಪಿ ಆರೋಪದ ಬಗ್ಗೆ ಮಾತನಾಡಿ, ನಾವು ಅಧಿಕಾರಕ್ಕೆ ಬಂದ ಕೆಲವೇ ತಿಂಗಳಲ್ಲಿ ನಿಗಮ ಮಂಡಳಿ ನೇಮಕ ಮಾಡುತ್ತಿದ್ದೇವೆ. ಅವರು ಅಧಿಕಾರಕ್ಕೆ ಬಂದ ಎಷ್ಟು ವರ್ಷಗಳ ನಂತರ ಮಾಡಿದರು? ಅವರಿಗೆ ನಾಲ್ಕೈದು ಸಚಿವರನ್ನು ನೇಮಕ ಮಾಡಲಾಗದೇ ಮುಖ್ಯಮಂತ್ರಿಯೇ ಎಲ್ಲಾ ಖಾತೆಯನ್ನು ಇಟ್ಟುಕೊಂಡಿದ್ದರು' ಎಂದು ಹೇಳಿದರು.

ಕಾಂತರಾಜು ವರದಿ ತಿರಸ್ಕರಿಸುವಂತೆ ಒಕ್ಕಲಿಗರ ಸಂಘದ ಆಗ್ರಹ ಪತ್ರಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಸಹಿ ಹಾಕಿದ್ದಾರೆ. ಡಿಸಿಎಂ ಮಾತ್ರವಲ್ಲದೇ ಕಾಂಗ್ರೆಸ್ ಪಕ್ಷದ ಬಹುತೇಕ ಒಕ್ಕಲಿಗ ನಾಯಕರು, ಇತರೇ ಪಕ್ಷಗಳ ಪ್ರಮುಖರು ಈ ಪತ್ರಕ್ಕೆ ಸಹಿ ಹಾಕಿದ್ದಾರೆ. ನವೆಂಬರ್ 24ಕ್ಕೆ ಸರ್ಕಾರಕ್ಕೆ ಹಿಂದುಳಿದ ವರ್ಗಗಳ ಆಯೋಗ ವರದಿ ಸಲ್ಲಿಸಲು ನಿರ್ಧರಿಸಿರುವ ಈ ಹೊತ್ತಲೇ ನಿರೀಕ್ಷೆಯಂತೆ ಸರ್ಕಾರದ ಒಳಗೆ ಹಾಗೂ ಹೊರಗಿನಿಂದ ಜಾತಿಗಣತಿ ವರದಿ ಕಿಚ್ಚು ಹೆಚ್ಚಾಗತೊಡಗಿದೆ.

## ಹುಕ್ಕೇರಿಯಲ್ಲಿ ಕಳೆಗಟ್ಟಿದ 'ಕನ್ನಡ ಹಬ್ಬ'

### ಕರ್ನಾಟಕ ರಾಜ್ಯೋತ್ಸವಕ್ಕೆ ಕ್ಷಣಗಣನೆ, ಕನ್ನಡ ಅಸ್ಮಿತೆ ಅನಾವರಣ



ಹುಕ್ಕೇರಿ: ಕನ್ನಡಿಗರ ಸ್ವಾಭಿಮಾನದ ಸಂಕೇತವಾದ 68ನೇ ಕನ್ನಡ ರಾಜ್ಯೋತ್ಸವ ವೈಭವದ ಸಂಭ್ರಮಕ್ಕೆ ಹುಕ್ಕೇರಿ ಪಟ್ಟಣ ನವವಧುವಿನಂತೆ ಶೃಂಗಾರಗೊಂಡಿದೆ. ಭಾವೈಕ್ಯತೆಗೆ ಹೆಸರುವಾಸಿಯಾದ ಈ ನೆಲದಲ್ಲಿ ಗುರುವಾರ ನಡೆಯಲಿರುವ ಕನ್ನಡ ಹಬ್ಬಕ್ಕೆ ಕ್ಷಣಗಣನೆ ಶುರುವಾಗಿದೆ. ನೆಲ–ಜಲ, ನಾಡು–ನುಡಿಗೆ ತನ್ನದೇಯಾದ ರೀತಿಯಲ್ಲಿ ವಿಶಿಷ್ಟ ಮತ್ತು ವಿಶೇಷವಾಗಿ ಕೊಡುಗೆ ಸಲ್ಲಿಸಿದ ಹುಕ್ಕೇರಿಯಲ್ಲಿ ಇದೀಗ ಕರ್ನಾಟಕ ರಾಜ್ಯೋತ್ಸವದ ವೈಭವ ಕಳೆಗಟ್ಟಿದೆ. ಇಡೀ ಪಟ್ಟಣದಲ್ಲಿ ಕನ್ನಡದ ಲವಲವಿಕೆ ಎದ್ದು ಕಾಣುತ್ತಿದೆ. ರಾಜ್ಯೋತ್ಸವದ ಸಂಭ್ರಮದ ಕ್ಷಣಗಳನ್ನು ಸವಿಯಲು, ದೃಶ್ಯಗಳನ್ನು ಕಣ್ತುಂಬಿಸಿಕೊಳ್ಳಲು ಕನ್ನಡ ಮನಸ್ಸುಗಳು ಕಾತರದಿಂದ ಕಾಯುತ್ತಿವೆ. ಕರ್ನಾಟಕ ರಾಜ್ಯೋತ್ಸವ ಉತ್ಸಾಹಿ ಸಮಿತಿಯು ಪ್ರತಿ ವರ್ಷದಂತೆ ಈ ಬಾರಿಯೂ ಪಟ್ಟಣದಲ್ಲಿ ಈ ಕನ್ನಡದ ಜಾತ್ರೆ ಆಯೋಜಿಸುವ ಮೂಲಕ ಯಶಸ್ವಿ ಮೂರನೇ ವರ್ಷಕ್ಕೆ ಪಾದಾರ್ಪಣೆ ಮಾಡಿದೆ. ತನ್ಮೂಲಕ ನವೆಂಬರ್ ಕನ್ನಡಿಗರಾಗದೇ ನಿತ್ಯ ಕನ್ನಡಿಗರು ಎಂಬ ಸಂದೇಶ ಸಾರಿದೆ. ರಾಜ್ಯೋತ್ಸವ ಆಚರಣೆಯ ಎಲ್ಲ ಸಿದ್ಧತೆಗಳು ಅಂತಿಮ ಹಂತದಲ್ಲಿವೆ.

ಪಟ್ಟಣದ ಪ್ರಮುಖ ವೃತ್ತಗಳು ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿವೆ. ಆಯಕಟ್ಟಿನ ಸ್ಥಳಗಳಲ್ಲಿ ಸ್ವಾಗತ ಕಮಾನಗಳನ್ನು ನಿರ್ಮಿಸಲಾಗಿದೆ. ಪಟ್ಟಣ ಪ್ರವೇಶಿಸುವ ಮತ್ತು ಒಳ ರಸ್ತೆಗಳುದ್ದಕ್ಕೂ ಕನ್ನಡ ಧ್ವಜಗಳು, ತಳಿರು–ತೋರಣಗಳನ್ನು ಕಟ್ಟಲಾಗಿದೆ. ಪ್ರಮುಖ ಬೀದಿ ಮತ್ತು ವೃತ್ತಗಳನ್ನು ಕನ್ನಡ ಧ್ವಜದ ಬಣ್ಣಗಳ ಬಟ್ಟೆಗಳಿಂದ ಶೃಂಗರೀಸಲಾಗಿದೆ.

ಪಟ್ಟಣದಲ್ಲಿ ಕನ್ನಡ ಕಲರವ ಕೇಳಿ ಬರಲಿದ್ದು ಕನ್ನಡ ಧ್ವಜಗಳ ಹಾರಾಟ ಜೋರಾಗಲಿದೆ. ಕನ್ನಡದ ಅಸ್ಮಿತೆ ಅನಾವರಣವಾಗಲಿದೆ. ಕನ್ನಡದ ಅಬ್ಬರದ ಕೂಗು ಕಿವಿಗಪ್ಪಳಿಸಲಿದೆ. ಎಲ್ಲ ದಿಕ್ಕುಗಳಲ್ಲಿ ಕನ್ನಡದ ವಾತಾವರಣ ಇಮ್ಮಡಿಗೊಂಡಿದೆ. ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಸಹಸ್ರಾರು ಕನ್ನಡದ ಮನಸ್ಸುಗಳು ಸೇರುವ ನಿರೀಕ್ಷೆ ಇದೆ.

### ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಧಾರವಾಡದಲ್ಲಿ ರಚನೆಗೊಂಡ ಕಾನೂನು ನೆರವು ರಕ್ಷಣಾ ಸಲಹೆಗಾರ ವ್ಯವಸ್ಥೆಯಲ್ಲಿ ಕಾರ್ಯನಿರ್ವಹಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಧಾರವಾಡ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಧಾರವಾಡದಲ್ಲಿ ರಚನೆಗೊಂಡ ಕಾನೂನು ನೆರವು ರಕ್ಷಣಾ ಸಲಹೆಗಾರ ವ್ಯವಸ್ಥೆ **(Legal Aid Defense Counsel System)** ಯ ಕಛೇರಿಯಲ್ಲಿ ಕಾರ್ಯನಿರ್ವಹಿಸಲು ತಾತ್ಕಾಲಿಕ ಆಧಾರದ (Temporary Base) ಮೇಲೆ ಕಛೇರಿಯ ಸಹಾಯಕ, ಕ್ಲರ್ಕ–01, ಸ್ವಾಗತಗಾರರು ಹಾಗೂ ಡಾಟಾ ಎಂಟ್ರಿ ಆಪರೇಟರ್–01 ಮತ್ತು ಕಛೇರಿ ಜವಾನ–01 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಭರ್ತಿಮಾಡಿದ ಅರ್ಜಿಗಳನ್ನು ಡಿಸೆಂಬರ್ 05 ರೊಳಗಾಗಿ ಎಡಿಆರ್ ಕಟ್ಟಡ, ಸಿವಿಲ್ ನ್ಯಾಯಾಲಯಗಳ ಆವರಣ, ಧಾರವಾಡ ಇಲ್ಲಿ ಸಲ್ಲಿಸಬಹುದು. ಸಂಬಂಧಪಟ್ಟ ಮಾಹಿತಿ ಮತ್ತು ಅರ್ಜಿಯನ್ನು ಜಿಲ್ಲಾ ನ್ಯಾಯಾಲಯದ ಅಂತರ್ಜಾಲ https://dharwad.dcourts.gov.in/dlsa-tlsc/ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಗಳಿಂದ ಪಡೆದು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಧಾರವಾಡದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ಹುಬ್ಬಳ್ಳಿ, ಕಲಘಟಗಿ, ನವಲಗುಂದ ಹಾಗೂ ಕುಂದಗೋಳ ತಾಲ್ಲೂಕು ಕಾನೂನು ಸೇವಾ ಸಮಿತಿಗಳ ಕಛೇರಿಯನ್ನು ಸಂಪರ್ಕಿಸಬಹುದೆಂದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಕೆ.ಜಿ. ಶಾಂತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಪದವಿ ಹಾಗೂ ಸ್ನಾತಕೋತ್ತರ ಪದವಿ, ಡಿಪ್ಲೋಮಾ ಕೋರ್ಸ್‌ಗಳಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಕಾಯ್ದೆ 2009ರ ಕಲಂ 58ರ ಅಡಿಯನ್ವಯ ಕರ್ನಾಟಕ ರಾಜ್ಯದಲ್ಲಿ 2023–24ರ ಶೈಕ್ಷಣಿಕ ವರ್ಷಕ್ಕೆ 3 ವರ್ಷದ ಎಲ್.ಎಲ್.ಬಿ., 5 ವರ್ಷದ ಬಿ.ಎ.,ಎಲ್.ಎಲ್.ಬಿ., 5 ವರ್ಷದ ಬಿ.ಬಿ.ಎ.,ಎಲ್‌ಎಲ್.ಬಿ., 5 ವರ್ಷದ ಬಿ.ಕಾಂ.,ಎಲ್.ಎಲ್.ಬಿ., 2 ವರ್ಷದ ಎಲ್.ಎಲ್.ಎಂ., ಅಧ್ಯಯನ ಕೇಂದ್ರ, ಡಿಪ್ಲೋಮಾ ಹಾಗೂ ಸರ್ಟಿಫೀಕೇಟ ಕೋರ್ಸ್ಗಳಿಗೆ ಹೊಸ, ನವೀಕರಣ, ವಿಸ್ತರಣೆ, ಶಾಶ್ವತ ಹಾಗೂ ಶಾಶ್ವತ ನವೀಕರಣ ಸಂಯೋಜನೆಗಾಗಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು, ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳು ಕುಲಸಚಿವರ ಕಛೇರಿ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ನವನಗರ, ಹುಬ್ಬಳ್ಳಿ–580025 ಯಲ್ಲಿ ದೊರೆಯುತ್ತವೆ ಹಾಗೂ ವಿಶ್ವವಿದ್ಯಾಲಯದ ಅಂತರ್ಜಾಲದಿಂದ ಸಹ ಡೌನಲೋಡ್ ಮಾಡಿಕೊಳ್ಳಬಹುದು. ಅರ್ಜಿಯನ್ನು ಡಿಸೆಂಬರ್ 11 ರೊಳಗಾಗಿ, ದಂಡ ಸಹಿತ ಡಿಸೆಂಬರ್ 16 ರೊಳಗಾಗಿ ಸಲ್ಲಿಸಬೇಕು. ಪ್ರತಿ ಅರ್ಜಿಗಳಿಗೆ ರೂ. 2,000/–ಗಳ ಹಾಗೂ ಸರ್ಟಿಫೀಕೇಟ ಕೋರ್ಸಗಳಿಗೆ 1,000/–ಗಳ ಶುಲ್ಕವನ್ನು ನಿಗದಿಪಡಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವೆಬ್ಸೈಟ್ www.kslu.karnataka.gov.in ನೋಡಬಹುದು ಎಂದು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುಮಕೂರು: ರಾಗಿಗೆ ಬೆಂಬಲ ಬೆಲೆ ನಿಗದಿ, 11 ಕಡೆ ಖರೀದಿಗೆ ಸಿದ್ಧತೆ

ತುಮಕೂರು: ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಸರ್ಕಾರದ ಆದೇಶದನ್ವಯ ಜಿಲ್ಲೆಯ 11 ಖರೀದಿ ಕೇಂದ್ರಗಳಲ್ಲಿ ರೈತರಿಂದ ರಾಗಿ ಖರೀದಿಸಲು ಪ್ರತಿ ಕ್ವಿಂಟಾಲ್ಗೆ 3846 ರೂ.ಗಳ ದರವನ್ನು ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಶ್ರೀನಿವಾಸ್ ತಿಳಿಸಿದರು.

ಇಂದಿರಾಗಾಂಧಿ ಜನ್ಮ ದಿನ: ಇಂದಿರಾ ಕ್ಯಾಂಟೀನ್’ನಲ್ಲಿ ಹೋಳಿಗೆ ಊಟ!

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ರಾಗಿ ಖರೀದಿಗಾಗಿ ಪೂರ್ವಸಿದ್ಧತೆ ಕೈಗೊಳ್ಳುವ ಬಗ್ಗೆ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ತೆರೆಯಲಾಗುವ 11 ರಾಗಿ ಖರೀದಿ ಕೇಂದ್ರಗಳಲ್ಲಿ ರೈತರಿಗೆ ಅನುಕೂಲವಾಗುವಂತೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ರಾಗಿ ಖರೀದಿಗೆ ಸಂಬಂಧಿಸಿದಂತೆ ಡಿಸೆಂಬರ್ 1 ರಿಂದ ರೈತರ ನೋಂದಣಿ ಕಾರ್ಯವನ್ನು ಪ್ರಾರಂಭಿಸಬೇಕು ಹಾಗೂ 2024ರ ಜನವರಿ 1 ರಿಂದ ಮಾರ್ಚ್ 31ರವರೆಗೆ ರೈತರಿಂದ ರಾಗಿಯನ್ನು ಖರೀದಿಸಬೇಕು. ರಾಗಿ ಖರೀದಿ ಪ್ರಕ್ರಿಯೆಯಲ್ಲಿ ಮಧ್ಯವರ್ತಿಗಳು ಪ್ರವೇಶಿಸದಂತೆ ಹಾಗೂ ಖರೀದಿಸಿದ ದಾಸ್ತಾನನ್ನು ಸಂಗ್ರಹಣೆ ಮಾಡಲು ಸ್ಥಳಾವಕಾಶದ ಕೊರತೆಯಾಗದಂತೆ ನಿಗಾವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಗಿಯನ್ನು ಖರೀದಿಸುವ ಹಂತದಲ್ಲಿ ಅಧಿಕಾರಿಗಳು ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಕೃಷಿ ಇಲಾಖೆಯಿಂದ ಗ್ರೇಡರ್'ಗಳನ್ನು ನೇಮಿಸಬೇಕು ಹಾಗೂ ಗ್ರೇಡರ್'ಗಳೊಂದಿಗೆ ರಾಗಿಯ ಗುಣಮಟ್ಟವನ್ನು ಜಂಟಿಯಾಗಿ ದೃಢೀಕರಿಸಲು 3ನೇ ವ್ಯಕ್ತಿ ಗುಣಮಟ್ಟ ಪರೀಕ್ಷಕರನ್ನು ನೇಮಿಸಬೇಕು. ರಾಗಿ ಸಂಗ್ರಹಣೆಗೆ ಅಗತ್ಯವಿರುವ ಗೋಣಿ ಚೀಲವನ್ನು ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಿಂದ ಒದಗಿಸಬೇಕೆಂದು ಸೂಚಿಸಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ ಮಾತನಾಡಿ, ಜಿಲ್ಲೆಯ ಚಿಕ್ಕನಾಯನಹಳ್ಳಿ ಮತ್ತು ಕುಣಿಗಲ್ ತಾಲ್ಲೂಕಿನಲ್ಲಿ 2 ಖರೀದಿ ಕೇಂದ್ರ ಹಾಗೂ ಗುಬ್ಬಿ, ಹುಳಿಯಾರು, ಮಧುಗಿರಿ, ಶಿರಾ, ತಿಪಟೂರು, ತುಮಕೂರು ಮತ್ತು ತುರುವೇಕೆರೆ ತಾಲ್ಲೂಕುಗಳಲ್ಲಿ ತಲಾ 1 ಕೇಂದ್ರ ಸೇರಿದಂತೆ ಒಟ್ಟು 11 ಖರೀದಿ ಕೇಂದ್ರಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಕಳೆದ ಬಾರಿ ಏಪ್ರಿಲ್ 30ರವರೆಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜಿಲ್ಲೆಯಲ್ಲಿ ಒಟ್ಟು 65709 ರೈತರು ನೋಂದಾಯಿಸಿದ್ದು, 950432.50 ಕ್ವಿಂಟಾಲ್ ರಾಗಿಯನ್ನು ನೋಂದಣಿ ಮಾಡಲಾಗಿತ್ತು ಹಾಗೂ 61550 ರೈತರಿಂದ 895876 ಕ್ವಿಂಟಾಲ್ ರಾಗಿಯನ್ನು ಖರೀದಿಸಲಾಗಿತ್ತು ಎಂದು ವಿವರಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ, ಕೃಷಿ ಮಾರುಕಟ್ಟೆ ಇಲಾಖೆ ಉಪನಿರ್ದೇಶಕ ರಾಜಣ್ಣ, ಕೃಷಿ ಅಧಿಕಾರಿಗಳು, ವಿವಿಧ ತಾಲ್ಲೂಕಿನ ತಹಶೀಲ್ದಾರರು, ಕಾನೂನು ಮಾಪನ ಶಾಸ್ತ್ರ ಇಲಾಖೆಯ ನಿರೀಕ್ಷಕರು, ಎಪಿಎಂಸಿ ಕಾರ್ಯದರ್ಶಿಗಳು ಸೇರಿದಂತೆ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

## ನ.28: ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಶಿವಮೊಗ್ಗ: ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿ ವತಿಯಿಂದ ನಿಧಿ ಆಪ್ಕೆ ನಿಕಟ್ 2.0 ಕಾರ್ಯಕ್ರಮವನ್ನು ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ನ.28 ರಂದು ಆಯೋಜಿಸಲಾಗಿದೆ.

ಶಿವಮೊಗ್ಗ ಜಿಲ್ಲೆಯಲ್ಲಿ ಡಿ.ವಿ.ಎಸ್. ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್, ಸರ್.ಎಂ.ವಿ.ರಸ್ತೆ, ಬಸ್ವೇಶ್ವರ ವೃತ್ತ, ಶಿವಮೊಗ್ಗ ಇಲ್ಲಿ ಹಾಗೂ ದಾವಣಗೆರೆ ಜಿಲ್ಲೆಯ ವೈರ್ ರೋಪ್ ಇಂಡಸ್ಟ್ರೀ ಪ್ರೈ. ಲಿ. ಸಂ.29, ಕೆಐಎಡಿಬಿ ಕೈಗಾರಿಕಾ ಪ್ರದೇಶ, ಲೋಕಿಕೆರೆ ರಸ್ತೆ, ದಾವಣಗೆರೆ ಇಲ್ಲಿ ಕಾರ್ಯಕ್ರಮ ನಡೆಯಲಿದೆ.

ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆ ಹಾಗೂ ಪಿಂಚಣಿದಾರರಿಗೆ ಮಧ್ಯಾಹ್ನ 2.30 ರಿಂದ ಸಂಜೆ 4 ಗಂಟೆವರೆಗೆ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಕಮಿಷನರ್ ಖಖ ತಿಳಿಸಿದ್ದಾರೆ.

## ಚಿಗುರು, ಯುವಸೌರಭ, ಸಂಸ್ಕೃತಿಕ ಕಾರ್ಯಕ್ರಮಕ್ಕಾಗಿ ಕಲಾವಿದರಿಂದ ಅರ್ಜಿ ಆಹ್ವಾನ

ಶಿವಮೊಗ್ಗ: ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯು ಚಿಗುರು, ಯುವಸೌರಭ ಮತ್ತು ಸಂಸ್ಕೃತಿಕ ಸೌರಭ ಕಾರ್ಯಕ್ರಮಗಳಿಗೆ ಅರ್ಹ ಕಲಾವಿದರಿಂದ ಅರ್ಜಿ ಆಹ್ವಾನಿಸಿದೆ.

ಚಿಗುರು ಕಾರ್ಯಕ್ರಮದಲ್ಲಿ ಶಾಸ್ತ್ರೀಯ ಸಂಗೀತ/ಕರ್ನಾಟಕ/ಹಿಂದೂಸ್ಥಾನಿ/ ಗಾಯನ, ವಾದ್ಯಸಂಗೀತ, ಜನಪದ ಗೀತೆಗಳು, ಸುಗಮ ಸಂಗೀತ/ ವಚನ ಸಂಗೀತ, ಸಮೂಹನೃತ್ಯ/ ನೃತ್ಯರೂಪಕ, ನಾಟಕ, ಯಕ್ಷಗಾನ, ಮೂಡಲಪಾಯ, ಬಯಲಾಟ, ಗೊಂಬೆಮೇಳ ಇತ್ಯಾದಿ ಸಮೂಹ ಕಾರ್ಯಕ್ರಮ ಹಾಗೂ ಏಕಪಾತ್ರಾಭಿನಯ ಸ್ಪರ್ಧೆಗಳಿಗೆ 08 ರಿಂದ 14 ವರ್ಷದೊಳಗಿನ ಮಕ್ಕಳು ಅರ್ಜಿ ಸಲ್ಲಿಸುವುದು.

ಯುವಸೌರಭ ಕಾರ್ಯಕ್ರಮದಲ್ಲಿ ಜನಪದ ಗೀತೆಗಳು, ಸುಗಮ ಸಂಗೀತ/ವಚನ ಸಂಗೀತ, ಸಮೂಹನೃತ್ಯ/ ನೃತ್ಯರೂಪಕ, ನಾಟಕ, ಜನಪದ ಪ್ರದರ್ಶನ ಕಲಾತಂಡ (ವಿವಿಧ 02 ಕಲಾಪ್ರಕಾರಗಳು), ಯಕ್ಷಗಾನ, ಮೂಡಲಪಾಯ, ಬಯಲಾಟ, ಗೊಂಬೆಮೇಳ ಇತ್ಯಾದಿ ಸಮೂಹ ಕಾರ್ಯಕ್ರಮ ಸ್ಪರ್ಧೆಗಳಿಗೆ 15 ರಿಂದ 30 ವರ್ಷದೊಳಗಿನ ಯುವಕರು ಅರ್ಜಿ ಸಲ್ಲಿಸುವುದು.

ಸಂಸ್ಕೃತಿಕ ಸೌರಭ ಕಾರ್ಯಕ್ರಮದಲ್ಲಿ ಶಾಸ್ತ್ರೀಯ ಸಂಗೀತ/ ಕರ್ನಾಟಕ/ ಹಿಂದೂಸ್ಥಾನಿ/ ಗಾಯನ, ವಾದ್ಯಸಂಗೀತ, ಜನಪದ ಗೀತೆಗಳು, ಸುಗಮ ಸಂಗೀತ/ವಚನ ಸಂಗೀತ, ಸಮೂಹನೃತ್ಯ/ ನೃತ್ಯರೂಪಕ, ಜನಪದ ಪ್ರದರ್ಶನ ಕಲಾತಂಡ (ವಿವಿಧ 03 ಕಲಾಪ್ರಕಾರಗಳು), ನಾಟಕ, ಯಕ್ಷಗಾನ, ಮೂಡಲಪಾಯ, ಬಯಲಾಟ, ಗೊಂಬೆಮೇಳ ಇತ್ಯಾದಿ ಸಮೂಹ ಕಾರ್ಯಕ್ರಮ ಹಾಗೂ ಗಮಕ/ ಕಥಾಕೀರ್ಥನೆ ಸ್ಪರ್ಧೆಗಳಿಗೆ 30 ವರ್ಷ ಮೇಲ್ಪಟ್ಟ ಹಿರಿಯ ಕಲಾವಿದರು ಅರ್ಜಿ ಸಲ್ಲಿಸುವುದು.

ಆಸಕ್ತರು ತಮ್ಮ ವಯಸ್ಸಿನ ದೃಢೀಕರಣದ ದಾಖಲೆ, ಸಂಗೀತ ವಿದ್ಯಾಭ್ಯಾಸದ ಪ್ರಥಮ ದರ್ಜೆ, ಪ್ರೌಢ ದರ್ಜೆ, ವಿದ್ವತ್ ಶ್ರೇಣಿ, ಆಕಾಶವಾಣಿ ಬಿ. ಗ್ರೇಡ್ ಹಾಗೂ ಸರ್ಕಾರದಿಂದ ನೀಡುವ ಪ್ರಶಸ್ತಿ ದಾಖಲೆಗಳೊಂದಿಗೆ ತಮ್ಮ ಸ್ವವಿವರಗಳನ್ನು ಬರೆದು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆ, ಕುವೆಂಪು ರಂಗಮಂದಿರ, ಶಿವಮೊಗ್ಗ ಇವರಿಗೆ ಡಿ.13 ರೊಳಗಾಗಿ ಸಲ್ಲಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-223354 ನ್ನು ಸಂಪರ್ಕಿಸುವುದು.

## ಯುಪಿಎಸ್ಸಿ ಪರೀಕ್ಷಾ ಪೂರ್ವ ತರಬೇತಿಗಾಗಿ ಅರ್ಜಿ ಆಹ್ವಾನ


ಶಿವಮೊಗ್ಗ: ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಯುಪಿಎಸ್ಸಿ **(UPSC)** ನಾಗರೀಕ ಸೇವೆ ಹಾಗೂ ಬ್ಯಾಂಕಿಂಗ್ ಪಿ.ಓ. (BANKING P.O) ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಪರೀಕ್ಷಾ ಪೂರ್ವ ತರಬೇತಿಗಾಗಿ ಹಿಂದುಳಿದ ವರ್ಗಗಗಳ ಪ್ರವರ್ಗ -1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ವಿದ್ಯಾರ್ಥಿಗಳು ಅಂಗೀಕೃತ ವಿಶ್ವ ವಿದ್ಯಾಲಯದಿಂದ ಯಾವುದಾದರೊಂದು ಪದವಿ ಪಡೆದಿರಬೇಕು, ಹಿಂದುಳಿದ ವರ್ಗಗಗಳ ಪ್ರವರ್ಗ -1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಯ ರೂ. 5.00ಲಕ್ಷಗಳ ಮಿತಿಯಲ್ಲಿರಬೇಕು. ಅಭ್ಯರ್ಥಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗಳಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಪರೀಕ್ಷಾ ಕೇಂದ್ರಗಳು, ದಿನಾಂಕ ಮತ್ತು ಸಮಯವನ್ನು ನಂತರದ ದಿನಗಳಲ್ಲಿ ಇಲಾಖಾ ವೆಬ್ಸೈಟ್ನಲ್ಲಿ ಪ್ರಕಟಿಸಲಾಗುವುದು.

ಆಸಕ್ತ ವಿದ್ಯಾರ್ಥಿಗಳು https://bcwd.karnataka.gov.in ಮೂಲಕ ದಿ: 04/12/2023 ರೊಳಗಾಗಿ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್ಸೈಟ್ ಅಥವಾ ಸಹಾಯವಾಣಿ ಸಂ.: 8050770004 ನ್ನು ಸಂಪರ್ಕಿಸುವುದು.

## ವ್ಯಕ್ತಿ ಕಾಣೆ



ಧಾರವಾಡ: ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಕೊಟಬಾಗಿ ಗ್ರಾಮದ ನಿವಾಸಿಯಾದ 68 ವರ್ಷದ ಶಿವಾನಂದ ಕಲ್ಲಪ್ಪ ಹುಲಮನಿ ಎಂಬ ವ್ಯಕ್ತಿ ಜೂನ್ 15, 2023 ರಂದು ರಾತ್ರಿ 8 ಗಂಟೆಗೆ ಕೊಟಬಾಗಿ ಗ್ರಾಮದ ತನ್ನ ಮನೆಯಿಂದ ಹೋದವನು ಮನೆಗೆ ಮರಳಿ ಬಂದಿರುವುದಿಲ್ಲ. ಸಂಬಂಧಿಕರ ಊರುಗಳಲ್ಲಿ ಹುಡುಕಾಡಿದರೂ ಸಿಕ್ಕಿರುವುದಿಲ್ಲ. ಎಲ್ಲಿಯೋ ಹೋಗಿ ಕಾಣೆಯಾಗಿದ್ದಾರೆ ಎಂದು ಗರಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾಣೆಯಾದ ವ್ಯಕ್ತಿಯ ಎತ್ತರ 5.5 ಫೂಟ್, ಮೈಯಿಂದ ಸಾಧಾರಣ, ಕೋಲು ಮುಖ, ಎಣ್ಣೆ ಗೆಂಪು ಮೈಬಣ್ಣ, ತಲೆಯಲ್ಲಿ ಕಪ್ಪು ಕೂದಲು ಇದ್ದು, ಕಪ್ಪು ಮೀಸೆ ಇರುತ್ತವೆ. ಅರ್ಧತೋಳಿನ ಶರ್ಟ್ ಹಾಗೂ ಕಪ್ಪು ಬಣ್ಣ ಪ್ಯಾಂಟ್ ಧರಿಸಿರುತ್ತಾನೆ. ಹಾಗೂ ಕನ್ನಡ ಭಾಷೆಯನ್ನು ಮಾತನಾಡುತ್ತಾನೆ.

ಇವರ ಸುಳಿವು ಸಿಕ್ಕವರು ತಮ್ಮ ಠಾಣಾ ವ್ಯಾಪ್ತಿಯಲ್ಲಿ ಕಂಡು ಬಂದಲ್ಲಿ ಅಥವಾ ಏನಾದರು ಮಾಹಿತಿ ಲಭ್ಯವಾದಲ್ಲಿ ತಕ್ಷಣ ಗರಗ ಪೊಲೀಸ್ ಠಾಣೆಗೆ ಸಂಪರ್ಕಿಸಬಹುದೆಂದು ಗರಗ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೃತ ದೇಹ ಪಡೆಯಲು ಕೋರಿಕೆ

ಮಂಗಳೂರು: ವೆನ್ಲಾಕ್ ಜಿಲ್ಲಾ ಆಸ್ಪತ್ರೆಯ ಶವಗಾರದಲ್ಲಿ ವಾರಸುದಾರಿಲ್ಲದೆ ವಿಲೇವಾರಿಯಾಗದ ಒಂದು ಮೃತದೇಹವಿದೆ.

ಮನೋಜ್ ಬಿನ್ ಹೆಸರು ರಾಜು, ವಯಸ್ಸು ಅಂದಾಜು 32 (ಗಂಡು), 5.4ಅಡಿ ಎತ್ತರ, ಕಪ್ಪು ಮೈಬಣ್ಣ, ಸಪೂರ ಶರೀರ, ಕಪ್ಪು ಕೂದಲು, ಕಪ್ಪು ಗಡ್ಡ ಮೀಸೆ, ಕೋಲು ಮುಖ ಈ ಮೃತದೇಹದ ವಾರಸುದಾರರು ಯಾರಾದರೂ ಇದ್ದಲ್ಲಿ ನಗರದ ಪೊಲೀಸ್ ಆಯುಕ್ತರ ಕಚೇರಿಗೆ ಮಾಹಿತಿ ನೀಡಬೇಕೆಂದು ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಲ್ಮೆಟ್ ಬಳಕೆ ಕುರಿತು ಬೈಲಹೊಂಗಲದಲ್ಲಿ ಪೋಲಿಸರಿಂದ ಜನ ಜಾಗೃತಿ



ಬೈಲಹೊಂಗಲ: ವಾಹನ ಸವಾರರು ಹೆಲ್ಮೆಟ್ ಬಳಕೆ ಮಾಡುವ ಮೂಲಕ ತಮ್ಮ ಅಮೂಲ್ಯವಾದ ಜೀವವನ್ನು ರಕ್ಷಿಸಿಕೊಳ್ಳುವುದರ ಜೊತೆಗೆ ತಮ್ಮ ಕುಟುಂಭದ ಭದ್ರತೆ ಕಾಪಾಡಿಕೊಳ್ಳಬೇಕು ಪಿಐ ಪಂಚಾಕ್ಷರಿ ಸಾಲಿಮಠ ಹೇಳಿದರು.

ಅವರು ಪಟ್ಟಣದ ರಾಣಿ ಸಂಗೊಳ್ಳಿ ರಾಯಣ್ಣ ಸರ್ಕಲ್, ಇಂಚಲ ರಸ್ತೆ, ಸೋಮವಾರ ಪೇಟ, ಬಜಾರ ರಸ್ತೆ, ಚೆನ್ನಮ್ಮ ವೃತ್ತ, ಸೇರಿದಂತೆ ನಗರದ ಪ್ರಮುಖ ರಸ್ತೆಗಳಲ್ಲಿ ಹೆಲ್ಮೆಟ್ ಧರಿಸಿ ದ್ವಿಚಕ್ರ ವಾಹನ ಚಾಲನೆ ಮಾಡುವ ಮೂಲಕ ಹೆಲ್ಮೆಟ್ ಕಡ್ಡಾಯದ ಕುರಿತು ಜಾಗೃತಿ ಮೂಡಿಸಿ ಮಾತನಾಡಿ,

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಅದೇಶಿಸಿದ್ದು ಇನ್ನೂ ಕೆಲ ದಿನಗಳಲ್ಲಿ ಹೆಲ್ಮೇಟ ಕಡ್ಡಾಯಗೊಳಿಸಲಿದ್ದು ಬೈಕ್ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸಂಚರಿಸಬೇಕು. ಇದರ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಹೆಲ್ಮೆಟ್ ಧರಿಸದ ಕಾರಣ ಬೈಲಹೊಂಗಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವರ್ಷಕ್ಕೆ 50 ರಿಂದ 60 ಸಾರ್ವಜನಿಕರ ಜೀವ ಹಾನಿಯಾಗುತ್ತಿದೆ. ಸುಮಾರು 100 ಕ್ಕೂ ಹೆಚ್ಚು ಸವಾರರು ಗಂಭೀರ ಗಾಯಗಳಾಗಿ ಆಸ್ಪತ್ರೆಯಲ್ಲಿ ನರಳಾಡುವ ಪರಿಸ್ಥಿತಿ ಇದೆ. ಸಾರ್ವಜನಿಕರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಪೊಲೀಸರೊಂದಿಗೆ ಸಹಕರಿಸಬೇಕು ಎಂದರು. ಪಿ ಎಎಸ್ ಐ, ಹಾಗೂ ಪೊಲೀಸ್ ಸಿಬ್ಬಂದಿಗಳು ಇದ್ದರು.

## ಡಿ.2 ರಂದು ಜಿಲ್ಲಾಮಟ್ಟದ ಯುವಜನೋತ್ಸವ

ಮಂಗಳೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಯುವಜನ ಒಕ್ಕೂಟ, ಮಂಗಳೂರು ತಾಲೂಕು ಯುವಜನ ಒಕ್ಕೂಟ, ಉಳ್ಳಾಲ ಪುರಸಭೆ ಹಾಗೂ ಶೃತಿಲಯ ಕಲಾ ಕೇಂದ್ರ ಕುತ್ತಾರು, ಉಳ್ಳಾಲ ಇವರ ಸಹಯೋಗದಲ್ಲಿ 2023-24ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಡಿಸೆಂಬರ್ 2 ರಂದು ಉಳ್ಳಾಲ ನಗರಸಭಾ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಚಿಸುವ ಸ್ಪರ್ಧಾಳುಗಳು ಡಿಸೆಂಬರ್ 2ರಂದು ಬೆಳಗ್ಗೆ 9.00 ಒಳಗೆ ವರದಿ ಮಾಡಿಕೊಳ್ಳಬೇಕು. ಭಾಗವಹಿಸುವ ಸ್ಪರ್ಧಾಳುಗಳು 15 ರಿಂದ 29 ವರ್ಷದವರಾಗಿದ್ದು, ದಕ್ಷಿಣ ಕನ್ನಡ ಜಿಲ್ಲೆಯವರಾಗಿರಬೇಕು, ಜನ್ಮ ದಿನಾಂಕ ದೃಢೀಕರಣ ದಾಖಲೆಯನ್ನು ತಪ್ಪದೆ ಹಾಜರುಪಡಿಸಬೇಕು. ಭಾಗವಹಿಸುವವರಿಗೆ ಪ್ರಯಾಣ ಭತ್ಯೆಯನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು ಆದ್ದರಿಂದ ತಪ್ಪದೇ ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿಯನ್ನು ತರಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ದೂರವಾಣಿ ಸಂಖ್ಯೆ 0824-2451264 ಸಂಪರ್ಕಿಸುವಂತೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಿಡ್ಕರ್ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಮಂಗಳೂರು: ಡಾ. ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಪರಿಶಿಷ್ಟ ಜಾತಿ,ಆದಿ ಕರ್ನಾಟಕ, ಆದಿ ಮಾದಿಗ, ಚಮ್ಮಾರ ಸಮಗಾರ, ಮೋಚಿ ಜನಾಂಗದವರಿಗೆ 2023- 24ನೇ ಸಾಲಿನ ವಿವಿಧ ಯೋಜನೆಗಳಾದ ಕೌಶಲ್ಯಾಭಿವೃದ್ಧಿ ತರಬೇತಿ ಶಿಬಿರ, ಮಾನವ ಸಂಪನ್ಮೂಲ ಯೋಜನೆ, ಸ್ವಾವಲಂಬಿ/ಸಂಚಾರಿ ಮಾರಾಟ ಮಳಿಗೆ, ಮಹಿಳಾ ಕುಶಲಕರ್ಮಿಗಳಿಗೆ ಕಾಯಕ ಸ್ಫೂರ್ತಿ ಯೋಜನೆ, ಪಾದುಕೆ ಕುಟೀರ ಯೋಜನೆ, ಮಾರುಕಟ್ಟೆ ಸಹಾಯ ಯೋಜನೆ ಮತ್ತು ವಸತಿ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಸೇವಾ ಸಿಂಧು ಪೇರ್ಟಲ್ ನಲ್ಲಿ ಡಿಸೆಂಬರ್ 19 ರೊಳಗೆ ಅಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ 9845801361 ಸಂಪರ್ಕಿಸುವಂತೆ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಪ್ರಕಟಣೆಯಲ್ಲಿ ತಿಳಿಸಿದೆ.

## ಹೊಸೂರ ರೈತನ ಕಬ್ಬಿನ ಜಮೀನಿಗೆ ವಿದ್ಯುತ್ ತಗುಲಿ ಬೆಂಕಿ: ಅಪಾರ ನಷ್ಟ

ಬೈಲಹೊಂಗಲ: ಸಮೀಪದ ಹೊಸೂರ ಗ್ರಾಮದಲ್ಲಿ ರೈತನ ಕಬ್ಬಿನ ಜಮೀನಿಗೆ ವಿದ್ಯುತ್ ತಗುಲಿ ಮಂಗಳವಾರ ಅಪಾರ ಪ್ರಮಾಣದ ಕಬ್ಬು ಸುಟ್ಟು ಕರಕಲಾಗಿದೆ.

ಗ್ರಾಮದ ರೈತ ಬಾಳಪ್ಪ ತುಕ್ಕನ್ನವರ ಅವರಿಗೆ ಸೇರಿದ ಸುಮಾರು ಆರು ಎಕರೆ ಜಮೀನಿನಲ್ಲಿ ಕಬ್ಬು ಬೆಳೆಯಲಾಗಿತ್ತು. ಕಬ್ಬು ಕಟಾವಿಗೆ ಬಂದಿತ್ತು. ಕಬ್ಬಿನ ಬೆಳೆಗೆ ತಾಗಿಕೊಂಡು ವಿದ್ಯುತ್ ಪ್ರಸರಣದ ತಂತಿಗಳು ಜೋತು ಬಿದ್ದವು. ಜೋತು ಬಿದ್ದ ವಿದ್ಯುತ್ ತಂತಿಗಳನ್ನು ತೆರುವುಗೊಳಿಸುವಂತೆ ರೈತರು ಸಂಬಂಧಿಸಿದ ಹೆಸ್ಕಾಂ ಇಲಾಖೆಗೆ ಸಾಕಷ್ಟು ಮನವಿ ಮಾಡಿದ್ದರು. ಅಷ್ಟರಲ್ಲಿ ಕೈಗೆ ಬಂದ ತುತ್ತು ಬಾಯಿಗೆ ಬರುವಷ್ಟರಲ್ಲಿ ಕಬ್ಬು ಬೆಂಕಿಗೆ ಆಹುತಿಯಾಗಿದೆ. ರೈತನ ಕಣ್ಣ ಮುಂದೆ ಕಬ್ಬು ಬೆಂಕಿಗೆ ಆಹುತಿಯಾದ ದೃಶ್ಯ ಕಂಡು ರೈತ ಕಂಗಾಲಾಗಿ ಕಣ್ಣೀರಾದರು.

ಬೆಂಕಿಯ ಕಿನಾಲೆ ಹೊತ್ತಿ ಉರಿಯುತ್ತಿದ್ದಂತೆ ಪಕ್ಕದ ಜಮೀನಿನ ರೈತರು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಪ್ರಯತ್ನಿಸಿದರು. ವಿಷಯ ತಿಳಿದು ಸ್ಥಳಕ್ಕೆ ಬಂದ ಅಗ್ನಿಶಾಮಕದಳ ಸಿಬ್ಬಂದಿ ಕಾಡ್ಗಿಚ್ಚಿನಂತೆ ಹೊತಿ ಉರಿದ ಬೆಂಕಿಯ ಕಿನಾಲೆಯನ್ನು ನಂದಿಸಿದರು.

ಕೈಗೆ ಬಂದ ತುತ್ತು ಬಾಯಿಗೆ ಬರುವಷ್ಟರಲ್ಲಿ ಕಬ್ಬು ಬೆಂಕಿಗೆ ಆಹುತಿಯಾಗಿದೆ.



ರೈತನ ಕಣ್ಣ ಮುಂದೆ ಕಬ್ಬು ಬೆಂಕಿಗೆ ಆಹುತಿಯಾದ ದೃಶ್ಯ ಕಂಡು ರೈತ ಕಂಗಾಲಾಗಿ ಕಣ್ಣೀರಾದರು. ಬೆಂಕಿಯ ಕೆನಾಲಿಗೆಗೆ ಕಬ್ಬು ಹೊತ್ತಿ ಉರಿಯುತ್ತಿದ್ದಂತೆ ಪಕ್ಕದ ಜಮೀನಿನ ರೈತರು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಪ್ರಯತ್ನಿಸಿದರು. ವಿಷಯ ತಿಳಿದು ಕೂಡಲೇ ಸ್ಥಳಕ್ಕೆ ಬಂದ ಅಗ್ನಿಶಾಮಕದಳ ಸಿಬ್ಬಂದಿ ಕಾಡ್ಗಿಚ್ಚಿನಂತೆ ಹೊತಿ ಉರಿದ ಬೆಂಕಿಯ ಕೆನ್ನಾಲಿಗೆಯನ್ನು ನಂದಿಸಿದರು.

## ಕಾರ್ಮಿಕ ಇಲಾಖೆಯಿಂದ ಬಾಲ ಕಾರ್ಮಿಕರ ತಪಾಸಣಾ ಕಾರ್ಯಕ್ರಮ




ಶಿವಮೊಗ್ಗ: ಜಿಲ್ಲಾ ಕಾರ್ಮಿಕ ಇಲಾಖೆಯು ಶಿವಮೊಗ್ಗ ಜಿಲ್ಲೆಯಲ್ಲಿ ಶಿವಮೊಗ್ಗ ನಗರ ಪ್ರದೇಶಗಳಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳುವುದರ ಕುರಿತು ತಪಾಸಣೆ ಹಾಗೂ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ತಪಾಸಣೆಯಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು/ ನ್ಯಾಯಾಧೀಶರಾದ ಸಿ.ಎನ್ ಚಂದನ್ರವರು ಹಾಜರಿದ್ದು, ವಾಣಿಜ್ಯ ಮಳಿಗೆಗಳ ಮಾಲೀಕರಿಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಬಾರದೆಂದು ಕರಪತ್ರಗಳನ್ನು ನೀಡುವುದರ ಮೂಲಕ ಅರಿವು ಮೂಡಿಸಲಾಯಿತು. ನಗರದ ವಿನೋಬನಗರ 60 ಅಡಿ ರಸ್ತೆ, ಆಟೋಕಾಂಪ್ಲೆಕ್ಸ್ ಗಳಲ್ಲಿ ತಪಾಸಣೆಯನ್ನು ಹಮ್ಮಿಕೊಳ್ಳಲಾಯಿತು.

ತಪಾಸಣಾ ತಂಡದಲ್ಲಿ ಕಾರ್ಮಿಕ ನಿರೀಕ್ಷಕರಾದ ಭೀಮೇಶ್.ಪಿ ಶಿವಮೊಗ್ಗ-02ನೇ ವೃತ್ತ, ಯೋಜನಾ ನಿರ್ದೇಶಕರಾದ ರಘುನಾಥ ಎ.ಎಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶ್ರೀಮತಿ ಆಶಾ, ಶ್ರೀಮತಿ ಶಾಂತಾಬಾಯಿ, ಸಮಾಜ ಕಲ್ಯಾಣ ಇಲಾಖೆಯ ಅಂಬರೀಶ್, ಶಿಕ್ಷಣ ಇಲಾಖೆಯ ಅಶೋಕ್ ಪಾಟೀಲ್, ಹಾಗೂ ಪೊಲೀಸ್ ಇಲಾಖೆ, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಹಾಜರಿದ್ದರು.

## ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 24.11.2023 ರಂದು ಬೆಳಿಗ್ಗೆ 09.00 ಘಂಟೆಯಿಂದ ಸಾಯಂಕಾಲ 04.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಸುವರ್ಣ ಸೌಧ ಉಪಕೇಂದ್ರದಲ್ಲಿ ಮೂರನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ವಿತರಣೆಯಾಗುವ ಕೊಂಡಸಕೊಪ್ಪ, ಹಲಗಾ, ಬಸ್ತವಾಡ, ಶಗನಮಟ್ಟಿ, ಮಾಸ್ತಮರಡಿ, ಬಸರಿಕಟ್ಟಿ, ಶಿಂಧೋಳ್ಳಿ, ಮುತಗಾ, ಶ್ರೀರಾಮ ಕಾಲನಿ, ಸಾರಿಗೆ ನಗರ, ಮಹಾಲಕ್ಷ್ಮೀ ಪುರಂ, ಸಾಯಿ ನಗರ, ಭರತೇಶ ಕಾಲೇಜ, ಶಿಂಧೋಳ್ಳಿ ಕ್ರಾಸ್, ನಿಲಜಿ ಕ್ರಾಸ್, ಕಮಕಾರಟ್ಟಿ, ಬಡೆಕೊಳ್ಳಮಠ, ಕೋಳಿಕೊಪ್ಪ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

## ರೌಡಿ ಶೀಟರ್ಗೆ ನೀಡಿದ್ದ ರಾಜ್ಯೋತ್ಸವ ಪ್ರಶಸ್ತಿ ವಾಪಸ್ ಪಡೆಯುಲು ಮುಂದಾದ ಜಿಲ್ಲಾಡಳಿತ



ಮೈಸೂರು: ರೌಡಿ ಶೀಟರ್ಗೆ ರಾಜ್ಯೋತ್ಸವ ಪ್ರಶಸ್ತಿನೀಡಿರುವ ವಿಚಾರಕ್ಕೆ ಸಂಬಂಧಿಸಿ ಇದೀಗಾ ಪ್ರಶಸ್ತಿಯನ್ನು ವಾಪಸ್ಸು ಪಡೆಯಲು ಮೈಸೂರು ಜಿಲ್ಲಾಡಳಿತ ಮುಂದಾಗಿದೆ.

ಮೈಸೂರಿನ ಲಷ್ಕರ್ ಠಾಣೆಯಲ್ಲಿ ರೌಡಿ ಶೀಟರ್ ಆಗಿರುವ ಅಶೋಕ್ ಅವರಿಗೆ ನವೆಂಬರ್1 ರಂದು ಮೈಸೂರು ಜಿಲ್ಲಾಡಳಿತ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿತ್ತು.

ಈ ಸುದ್ದಿ ಪ್ರಕಟವಾಗುತ್ತಿದಂತೆ ಎಚ್ಚೆತ್ತುಕೊಂಡ ಜಿಲ್ಲಾಡಳಿತ ಪ್ರಶಸ್ತಿಯನ್ನ ವಾಪಸ್ಸು ಪಡೆಯಲು ಮುಂದಾಗಿದೆ.

ರಾಜ್ಯೋತ್ಸವ ಪ್ರಶಸ್ತಿಯನ್ನು ಹಿಂಪಡೆಯಲಾಗುತ್ತೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸುದರ್ಶನ್ ಅವರು ಮಾಹಿತಿ ನೀಡಿದ್ದಾರೆ. ಕೊನೆ ಕ್ಷಣದಲ್ಲಿ ಪ್ರಶಸ್ತಿಗೆ ಹೆಸರು ಸೇರ್ಪಡೆಯಾಗಿತ್ತು. ಪೊಲೀಸರಿಂದ ಆತನ ಹಿನ್ನೆಲೆ, ಮಾಹಿತಿ ಪಡೆಯಲು ತಡವಾಯಿತು. ಇದೀಗಾ ಆತ ರೌಡಿ ಶೀಟರ್ ಎಂಬುದು ತಿಳಿದು ಬಂದಿದೆ. ಈ ಕಾರಣದಿಂದ ರೌಡಿ ಶೀಟರ್ ಅಶೋಕ್ಗೆ ನೀಡಲಾಗಿದ್ದ ಪ್ರಶಸ್ತಿಯನ್ನ ವಾಪಸ್ಸು ಪಡೆಯಲಾಗುತ್ತೆ ಎಂದು ತಿಳಿಸಿದ್ದಾರೆ.

## ಗ್ರಾಪಂ ಸಿಬ್ಬಂದಿಗಳಿಗೆ ಗುಡ್ ನ್ಯೂಸ್ ಕೊಟ್ಟ ಸರ್ಕಾರ

ಬೆಂಗಳೂರು: ರಾಜ್ಯದ ಗ್ರಾಮಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ನೌಕರರಿಗೆ ರಾಜ್ಯ ಸರ್ಕಾರವು ಸಿಹಿಸುದ್ದಿ ನೀಡಿದ್ದು, 11,543 ಸಿಬ್ಬಂದಿಗಳಿಗೆ ಸೇವಾ ಭದ್ರತೆ ಒದಿಗಿಸಲು ಮುಂದಾಗಿದೆ.

ಸದಾ ಅಭದ್ರತೆಯಲ್ಲೇ ಕೆಲಸ ಮಾಡುತ್ತಿದ್ದ ಗ್ರಾಮ ಪಂಚಾಯಿತಿಗಳ ನೌಕರರ ನೇಮಕಾತಿಗೆ ಅನುಮೋದನೆ ನೀಡಿ ಐತಿಹಾಸಿಕ ನಿರ್ಧಾರ ರಾಜ್ಯ ಸರ್ಕಾರ ಕೈಗೊಂಡಿದೆ. ಸಚಿವ ಪ್ರಿಯಾಂಕ್ ಖರ್ಗೆ ಅವರ ಸೇವಾ ಭದ್ರತೆಯನ್ನು ಒದಗಿಸುವ ಈ ನಿರ್ಧಾರದಿಂದ 11, 543 ನೌಕರರಿಗೆ ಜೀವನ ಭದ್ರತೆ ಸಿಕ್ಕಂತಾಗಿದೆ.

2017ಕ್ಕೆ ಮುಂಚಿತವಾಗಿ ನೇಮಕಗೊಂಡು ಗ್ರಾಮಪಂಚಾಯಿತಿಗಳಲ್ಲಿ ಜವಾನ, ನೀರಗಂಟಿ, ಸ್ವಚ್ಛತಾಗಾರರಾಗಿ ಕೆಲಸ ಮಾಡುತ್ತಿರುವ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆ ನೀಡಲಾಗುತ್ತದೆ. ಇದರಿಂದಾಗಿ 11,543 ಸಿಬ್ಬಂದಿಗೆ ಸೇವಾ ಭದ್ರತೆಯ ಭವಾನೆ ಬಲವರ್ಧನೆಗೊಳ್ಳಲಿದೆ.

2017 ಕ್ಕೂ ಮೊದಲು ಕರವಸೂಲಿಗಾರರು, ಕ್ಲರ್ಕ್ ಕಂ ಡೇಟಾ ಎಂಟ್ರಿ ಆಪರೇಟರ್, ವಾಟರ್ ಆಪರೇಟರ್, ಸ್ವಚ್ಛತಾಗಾರರು, ಅಟೆಂಡರ್



ಸೇರಿದಂತೆ 18,672 ಸಿಬ್ಬಂದಿ ನೇಮಕಗೊಂಡು ನಾನಾ ಕಾರಣಗಳಿಗಾಗಿ ಅನುಮೋದನೆ ಸಿಕ್ಕಿರಲಿಲ್ಲ. ಈ ಪೈಕಿ 11, 543 ಸಿಬ್ಬಂದಿ ಕನಿಷ್ಟ ವಿದ್ಯಾರ್ಹತೆ ಹೊಂದಿಲ್ಲ ಎಂಬ ಕಾರಣ ನೀಡಲಾಗಿತ್ತು. ಹೀಗಾಗಿ ಇದೀಗ ಸರ್ಕಾರವ ಈ ಸಿಬ್ಬಂದಿಗಳಿಗೆ ಸೇವಾ ಭದ್ರತೆಯನ್ನು ಒದಗಿಸಲು ಮುಂದಾಗಿದೆ.

## ಡಿ. 2ರಂದು ವಿಶ್ವ ವಿಕಲಚೇತನರ ದಿನಾಚರಣೆ

ಮಂಗಳೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಮತ್ತು ಲಯನ್ಸ್ ಕ್ಲಬ್ ಮಂಗಳೂರು ಗಾಂಧಿನಗರ ಇವರ ಸಹಯೋಗದಲ್ಲಿ ಡಿಸೆಂಬರ್ 2 ರಂದು ನಗರದ ಕುದ್ಮಲ್ ರಂಗರಾವ್ ಪುರಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ವಿಶ್ವ ವಿಕಲಚೇತನ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 9.15ಕ್ಕೆ ವಿಶೇಷ ಶಾಲೆಗಳ ವಿಕಲಚೇತನ ಮಕ್ಕಳು ಹಾಗೂ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳಿಂದ ಮಂಗಳೂರು ವಿಶ್ವವಿದ್ಯಾನಿಲಯ ಕಾಲೇಜು ಆವರಣದಿಂದ ಪುರಭವನ ಸಭಾಂಗಣದವರೆಗೆ ಸಾಮಾಜಿಕ ಅರಿವಿಗಾಗಿ ಪಥಸಂಚಲನವನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಗಾವಿ ವರದಿ

News

# ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಸಮುದಾಯದವರ ಕುಂದು ಕೊರತೆಗಳ ಸಭೆ

ಧಾರವಾಡ: ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರ ಅಧ್ಯಕ್ಷತೆಯಲ್ಲಿ (ನ.22) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಸಮುದಾಯದವರ ಕುಂದು ಕೊರತೆಗಳ ಸಭೆ ಜರುಗಿತು.

ಸಭೆಯಲ್ಲಿ ಸಮುದಾಯದ ವ್ಯಕ್ತಿಗಳ ವೈಯಕ್ತಿಕ ಸಮಸ್ಯೆಗಳನ್ನು, ಸಮುದಾಯದ ಸಮಸ್ಯೆಗಳನ್ನು ಆಲಿಸಿದ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಅಧಿಕಾರಿಗಳಿಗೆ ಪ್ರತಿ ಕುಂದುಕೊರತೆಗಳನ್ನು ಸೂಕ್ತವಾಗಿ ಸ್ಪಂದಿಸಿ, ಪರಿಹರಿಸಬೇಕು. ಸರಕಾರದ ಹಂತದಲ್ಲಿ ಕ್ರಮ ಅಗತ್ಯವಿದ್ದರೆ, ವರದಿಯೊಂದಿಗೆ ಶಿಪಾರಸ್ಸು ಮಾಡುವಂತೆ ನಿರ್ದೇಶಿಸಿದರು.

ಎಲ್ಲ ತಹಸಿಲ್ದಾರರು ಪ್ರತಿ ಮೂರು ತಿಂಗಳಿಗೊಮ್ಮೆ ತಪ್ಪದೇ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಸಮುದಾಯದವರ ಕುಂದುಕೊರತೆಗಳ ಸಭೆಯನ್ನು ತಾಲೂಕು ಮಟ್ಟದಲ್ಲಿ ಜರುಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ವೇದಿಕೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಮಹಾನಗರ ಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ಧನಗೌಡರ ಇದ್ದರು.

ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕ ಅಲ್ಲಾ ಭಕಾಷ ಎಂ.ಎಸ್. ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಹುಬ್ಬಳಿಯ ರಾಜಗೋಪಾಲ ನಗರದ ಖಾಸಗಿ ಅನುದಾನಿತ ಶಾಲೆಯ ಶಿಕ್ಷಕರ ನೇಮಕ, ಕುಡಿಯುವ ನೀರು ವ್ಯವಸ್ಥೆ ಮತ್ತು ಸಂಸ್ಥೆಯ ಹೆಸರು ತಿದ್ದುಪಡಿ ಕುರಿತು ಶಿವಶಂಕರ ಭಂಡಾರಿ ಮನವಿ ಸಲ್ಲಿಸಿದರು.



ಈ ಕುರಿತು ಪರಿಶೀಲಿಸಿ ತಕ್ಷಣ ಕ್ರಮವಹಿಸಲು ಶಾಲಾಶಿಕ್ಷಣ ಇಲಾಖೆ ಉಪನಿರ್ದೇಶಕರಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸಮನ್ವಯ ಸಾಧಿಸಲು ತಿಳಿಸಿದರು.

ಮಹಾನಗರಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ಅವರು ಮಾತನಾಡಿ, ಮಹಾನಗರ ವ್ಯಾಪ್ತಿಯಲ್ಲಿ ವಿವಿಧ ನಗರಗಳಲ್ಲಿ ಆಶ್ರಯ ಹಾಗೂ ವಿವಿಧ ವಸತಿ ಯೋಜನೆ ಮನೆಗಳ ಕುರಿತು ಈಗಾಗಲೇ ಅಧಿಕಾರಿಗಳ ನೇತೃತ್ವದಲ್ಲಿ ಸಮೀಕ್ಷೆ ಮಾಡಲಾಗಿದ್ದು, ಬಾಡಿಗೆದಾರರು, ಮಾಲೀಕರು, ಬೀಗ ಹಾಕಿದ ಮನೆಗಳು ಮತ್ತು ಮಾರಾಟ ಮಾಡಿದ ಮನೆಗಳ ಕುರಿತು ಸಮೀಕ್ಷಾ ವರದಿ ತಯಾರಿಸಿ, ಜಿಲ್ಲಾಡಳಿತಕ್ಕೆ ಹಾಗೂ ಸಚಿವರಿಗೆ ಸಲ್ಲಿಸಲಾಗುವುದು ಎಂದು ಹೇಳಿದರು.

ವಿವಿಧ ಕುಂದುಕೊರತೆಗಳ ಕುರಿತು ದಾನಪ್ಪ ಕಬ್ಬೇರ, ಮೋಹನ ಹಿರೇಮನಿ, ಆನಂದ ಅದ್ವಾನಿ, ಅಶೋಕ ದೊಡಮನಿ, ಲಕ್ಷ್ಮಣ ದೊಡಮನಿ, ಚಿಕ್ಕತುಂಬಳ, ಲಕ್ಷ್ಮಣ ಬಕ್ಕಾಯಿ, ಕಲ್ಮೇಶ ಹಾದಿಮನಿ, ಗುರುನಾಥ ಉಳ್ಳಿಕಾಶಿ, ತಿಪ್ಪಣ್ಣ ತಳವಾರ, ಸೇರಿದಂತೆ ವಿವಿಧ ಮುಖಂಡರು ಮಾತನಾಡಿದರು.

ಸಭೆಯಲ್ಲಿ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ಜಿಲ್ಲೆಯ ಕಲಘಟಗಿ, ನವಲಗುಂದ, ಅಣ್ಣಿಗೇರಿ, ಕುಂದಗೋಳ, ಹುಬ್ಬಳ್ಳಿ, ಅಳ್ನಾವರ, ಧಾರವಾಡ ತಾಲೂಕುಗಳ ವಿವಿಧ ಗ್ರಾಮಗಳ ಮತ್ತು ನಗರಗಳ ದಲಿತ ಸಂಘಟನೆಗಳ ಪ್ರತಿನಿಧಿಗಳು, ಮುಖಂಡರು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಸಮುದಾಯದವರು ಭಾಗವಹಿಸಿದ್ದರು.

# 26 ರಂದು ವಾದ್ಯ–ಸಂಗೀತ ಕಾರ್ಯಕ್ರಮ

ಬೆಳಗಾವಿ: ಇಲ್ಲಿನ ಕೆಎಲ್ ಇಯ ಜೆ.ಎಮ್ .ಸಿ ಆವರಣದ ಡಾ. ರಾಜಶೇಖರ ಸಭಾಂಗಣದಲ್ಲಿ ಮಂಗಳವಾರ 26 ರಂದು ಲಿಂಗಾಯತ ಮಹಿಳಾ ಸಮಾಜದ ವತಿಯಿಂದ ವಾದ್ಯ–ಸಂಗೀತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಗೌರವ ಅತಿಥಿಯಾಗಿ ಸಂಸದೆ ಮಂಗಲಾ ಅಂಗಡಿ, ರಾಣಿ ಚನ್ನಮ್ಮ ಮಹಿಳಾ ಬ್ಯಾಂಕ್ ಅಧ್ಯಕ್ಷೆ ಆಶಾತಾಯಿ ಕೋರೆ ಆಗಮಿಸಲಿದ್ದಾರೆ. ಅನುರಾಧಾ ಬಾವಿ ಕಾರ್ಯಕ್ರಮ ನಿರ್ವಹಿಸವರು. ಅದ್ಯಕ್ಷರಾದ ನೈನಾ ಗಿರಿಗೌಡರ, ಕಾರ್ಯದರ್ಶಿ ಕಾವೇರಿ ಕಿಲಾರಿ ಎಲ್ಲಾ ಪದಾಧಿಕಾರಿಗಳು ಹಾಗೂ ಲಿಂಗಾಯತ ಮಹಿಳಾ ಸಮಾಜದ ಸದಸ್ಯರು ಹಾಗೂ ಆತ್ಮೀಯರು ಈ ಕಾರ್ಯಕ್ರಮಕ್ಕೆ ಆಗಮಿಸಬೇಕು ಎಂದು ಲಿಂಗಾಯತ ಮಹಿಳಾ ಸಮಾಜದ ಸಂಸ್ಥಾಪಕರಾದ ಶೈಲಜಾ ಬಿಂಗೆ ಅವರು ಪ್ರಕಟನೆಯಲ್ಲಿ ತಿಳಿಸಿದರು.

# ಡಿ. 26 ರಂದು ಬೆಳಗಾವಿಯಲ್ಲಿ ಬಣಜಿಗ ವಧು ವರರ ಸಮ್ಮೇಳನ



ಬೆಳಗಾವಿ; ಇದೇ ಡಿಸೆಂಬರ್ ತಿಂಗಳ 26 ರಂದು ಮಂಗಳವಾರ ಬಣಜಿಗ ವಧು–ವರರ ಸಮ್ಮೇಳನವನ್ನು ಬೆಳಗಾವಿಯಲ್ಲಿ ಏರ್ಪಡಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಬೆಳಗಾವಿ ಘಟಕದ ಖಜಾಂಚಿ ಮಲ್ಲಿಕಾರ್ಜುನ (ಪಾಪಣ್ಣ) ಹಿಡದುಗ್ಗಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಧು ವರರ ಸಮ್ಮೇಳನದಲ್ಲಿ ಭಾಗವಹಿಸುವವರು ತಮ್ಮ ಇತ್ತೀಚಿನ ಫೋಟೋ ಮತ್ತು ಬಯೋಡಾಟಾವನ್ನು ತಕ್ಷಣ ಕಳುಹಿಸಿಕೊಡಬೇಕು.

ಸಮ್ಮೇಳನದಲ್ಲಿ ಭಾಗವಹಿಸುವವರು ರೂ. 1000/– ಶುಲ್ಕವನ್ನು ತುಂಬಬೇಕಾಗುತ್ತದೆ ಸಮ್ಮೇಳನದಲ್ಲಿ ಭಾಗವಹಿಸುವ ವರ ಅಥವಾ ವಧು ಮತ್ತು ಅವರೊಂದಿಗೆ ಇಬ್ಬರು ಪಾಲಕರು ಭಾಗವಹಿಸಬಹುದಾಗಿದೆ, ಶೇಖ ಬೆಳಗಿನ ಉಪಹಾರ, ಮಧ್ಯಾಹ್ನ ಊಟದ ಮತ್ತು ಸಾಯಂಕಾಲ ಚಹಾದ ವ್ಯವಸ್ಥೆಯನ್ನು ಮಾಡಲಾಗಿದೆ ಹೆಚ್ಚಿನ ಮಾಹಿತಿಗಾಗಿ ಮೊಬೈಲ್: 98440 52028 ಸಂಖ್ಯೆ ಸಂಪರ್ಕಿಸಬಹುದಾಗಿದೆ.

# ದೀಪಿಕಾ ಚಾಟೆಯವರ ಮೂರು ಪುಸ್ತಕ ಲೋಕಾರ್ಪಣೆ

ಬೆಳಗಾವಿ: ಭಗವಾನ್ ಶ್ರೀರಾಮ ಜಗತ್ತಿಗೆ ಮಾದರಿಯಾದ ಅವತಾರಿ ಪುರುಷ. ಶ್ರೀರಾಮಚಂದ್ರ ಕೇವಲ ಆಧ್ಯಾತ್ಮಿಕ ಅಥವಾ ಐತಿಹಾಸಿಕ ವ್ಯಕ್ತಿ ಅಲ್ಲ. ಕರುಣೆ ಮತ್ತು ನಂಬಿಕೆಯ ಪ್ರತೀಕ ಎಂದು ಹಿರಿಯ ಸಾಹಿತಿ ಮಾಲತಿ ಮುದಕವಿ ಹೇಳಿದರು.

ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಜಿಲ್ಲಾ ಲೇಖಕಿಯರ ಸಂಘದ ದತ್ತಿ ಕಾರ್ಯಕ್ರಮದಲ್ಲಿ ದೀಪಿಕಾ ಚಾಟೆಯವರ ಮೂರು ಪುಸ್ತಕಗಳು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಶ್ರೀ ರಾಮನ ಒಳ್ಳೆಯ ಗುಣಗಳು ದೀಪಿಕಾ ಚಾಟೆಯವರ ಬರೆದಿರುವ ಶ್ರೀರಾಮಚಂದ್ರ ಚರಿತ ಪುಸ್ತಕದಲ್ಲಿ ಚೆನ್ನಾಗಿ ಮೂಡಿಬಂದಿದೆ ತಿಳಿಸಿದರು.

ಶ್ರೀರಾಮಚಂದ್ರನ ಸಂಪೂರ್ಣ ಜೀವನ ಈ ಜಗತ್ತಿಗೆ ಪಠ್ಯ ಪುಸ್ತಕವಿದ್ದಂತೆ ಜಗತ್ತಿಗೆ ಶ್ರೀರಾಮನೇ ಮಾದರಿ. ರಾಮನ ನಡೆ–ನುಡಿ, ಒಳ್ಳೆಯ ಗುಣಗಳನ್ನು ಇಂದಿನ ಯುವ ಪೀಳಿಗೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ




ಎಂದು ಕಿವಿಮಾತು ಹೇಳಿದರು.

"ಚುಟುಕು ಚಂದಿರ" ಚುಟುಕು ಸಂಕಲನ ಹಿರಿಯ ಸಾಹಿತಿಗಳಾದ ಎಲ್ ಎಸ್ ಶಾಸ್ತ್ರಿ ಪರಿಚಯಿಸಿದರು.

"ಹನಿ ಇಬ್ಬನಿ" ಹನಿಗವನ ಸಂಕಲನವನ್ನು ಹಿರಿಯ ಸಾಹಿತಿಗಳಾದ ನೀಲಗಂಗಾ ಚರಂತಿಮಠ ಪರಿಚಯಿಸಿದರು.

ದತ್ತಿ ದಾನಿಗಳಾದ ಜಯಶ್ರೀ ನಿರಾಕಾರಿಯವರು ತಮ್ಮ ತಾಯಿಯ ಕುರಿತಾದ ಸ್ವರಚಿತ ಹಾಡು ಹಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಲೇಖಕಿಯರ ಸಂಘದ ಕಿರು ಕಥಾ ಸ್ಪರ್ಧೆಯ ಬಹುಮಾನಗಳನ್ನು ವಿತರಿಸಲಾಯಿತು.

ಪ್ರಥಮ ಸ್ಥಾನ ರಂಜಿತಾ ಮಹಾಜನ, ದ್ವಿತೀಯ ಸ್ಥಾನವನ್ನು ಇಂದಿರಾ ಮೋಟೇಬೆನ್ನೂರ, ತೃತೀಯ ಸ್ಥಾನವನ್ನು ರಾಣಿ ಬಾಗವಾಡಮಠ ಪಡೆದರು.

ಈ ಸಂದರ್ಭದಲ್ಲಿ ಲೇಖಕಿಯರ ಸಂಘದ ಅಧ್ಯಕ್ಷೆ ಜಯಶೀಲಾ ಬ್ಯಾಕೋಡ, ರಾಜೇಶ್ವರಿ ಹೆಗಡೆ, ಅನಿತಾ ಮಾಲಗತ್ತಿ ಹಾಗೂ ಪ್ರಭಾ ಪಾಟೀಲ ಅತಿಥಿಗಳು ಹಾಗೂ ದಾನಿಗಳನ್ನು ಪರಿಚಯಿಸಿದರು. ಹಿರಿಯ ಸಾಹಿತಿಗಳಾದ ಆಶಾ ಕಡಪಟ್ಟಿ, ಸುನಂದಾ ಎಮ್ಮಿ, ರಂಜನಾ ನಾಯಕ ಬಸವರಾಜ ಗಾರ್ಗಿ, ಜಿಲ್ಲಾ ಲೇಖಕಿಯರ ಸಂಘದ ಕಾರ್ಯದರ್ಶಿ ಡಾ.ಭಾರತಿ ಮಠದ ಸ್ವಾಗತಿಸಿ ನಿರೂಪಿಸಿದರು. ಡಾ.ಅನ್ನಪೂರ್ಣ ಹಿರೇಮಠ ವಂದಿಸಿದರು.

# ಅಂಗನವಾಡಿ ಕಾರ್ಯಕರ್ತರ ಮನವಿ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ಅಂಗನವಾಡಿ ಕಾರ್ಯಕರ್ತರ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸರಕಾರ ಸ್ಪಂದಿಸಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭರವಸೆ ನೀಡಿದ್ದಾರೆ.

ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಸ್ವತಂತ್ರ ಸಂಘಟನೆಯ ಕಾರ್ಯಕರ್ತರು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಅನಿರ್ದಿಷ್ಟಕಾಲ ಧರಣಿ ಸತ್ಯಾಗ್ರಹ ನಡೆಸುತ್ತಿದ್ದು, ಬುಧವಾರ ಸಂಘಟನೆಯ ಮುಖಂಡರು ಬೆಂಗಳೂರಿನ ಲಕ್ಷ್ಮೀ ಹೆಬ್ಬಾಳಕರ್ ಅವರ ಗೃಹಕಚೇರಿಗೆ ಆಗಮಿಸಿ ಮನವಿ ಸಲ್ಲಿಸಿದರು.

ಮನವಿಯನ್ನು ಸ್ವೀಕರಿಸಿದ ಸಚಿವರು, ಇಲಾಖಾ ಹಂತದಲ್ಲಿರುವ ಬೇಡಿಕೆಗಳನ್ನು ಈಡೇರಿಸಲು ಕ್ರಮ ಕೈಗೊಳ್ಳಲಾಗುವುದು, ಉಳಿದ ಬೇಡಿಕೆಗಳ ಕುರಿತು ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಮಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕಿ ಎಂ.ಎಸ್. ಅರ್ಚನಾ ಹಾಗೂ ವಿಶೇಷ ಕರ್ತವ್ಯಾಧಿಕಾರಿ ನಿಶ್ಚಲ್ ಉಪಸ್ಥಿತರಿದ್ದರು.

# 100 ತಿಂಗಳು ದಾಟಿದ ಹಾಸ್ಯಕೂಟ

## ರಾಜ್ಯೋತ್ಸವ – ಹಾಸ್ಯೋತ್ಸವ ವಿಶೇಷ ಕಾರ್ಯಕ್ರಮ



ಬೆಳಗಾವಿ: ಇದೇ ದಿ. 25 ಶನಿವಾರ ಸಾಯಂಕಾಲ 4–30 ಕ್ಕೆ ಹಿಂದವಾಡಿ ಗೋಮಟೇಶ ವಿದ್ಯಾಪೀಠ ಹತ್ತಿರವಿರುವ ಐ.ಎಂ.ಇ.ಆರ್. ಸಭಾಭವನದಲ್ಲಿ ಹಾಸ್ಯಕೂಟ "ರಾಜ್ಯೋತ್ಸವ – ಹಾಸ್ಯೋತ್ಸವ." ಎಂಬ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

2014 ರಲ್ಲಿ ಪ್ರಾರಂಭವಾದ ಹಾಸ್ಯಕೂಟದ 117 ನೇ ತಿಂಗಳ ಕಾರ್ಯಕ್ರಮವಿದಾಗಿದೆ. ಪ್ರತಿ ತಿಂಗಳೂ ತಪ್ಪದೇ ಕಾರ್ಯಕ್ರಮ ಮಾಡುತ್ತ 100 ರ ಗಡಿ ದಾಟಿದ ಹಾಗೂ ರಾಜ್ಯೋತ್ಸವ ನಿಮಿತ್ತ ಈ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದಾಗಿದೆ. ಸಂಚಾಲಕ ಗುಂಡೇನಟ್ಟಿ ಮಧುಕರ, ಪ್ರೊ. ಜಿ.ಕೆ. ಕುಲಕರ್ಣಿ, ಎಂ. ಬಿ. ಹೊಸಳ್ಳಿ ತಮ್ಮ ನಗೆ ಮಾತುಗಳಿಂದ ರಂಜಿಸಲಿದ್ದು ಜಿ. ಎಸ್ ಸೋನಾರ ಕನ್ನಡ ನಾಡು ನುಡಿ ಕುರಿತಾದ ಕರೋಕೆ ಚಿತ್ರಗೀತೆಗಳನ್ನು ಹಾಡಲಿದ್ದಾರೆ. ಅರವಿಂದ ಹುನಗುಂದ ಮತ್ತು ಕೆ. ತಾನಾಜಿ ನಿರೂಪಿಸಲಿದ್ದಾರೆ. ಕಾರ್ಯಕ್ರಮ ಜ್ಞಾನಶಾಲಾ ಸೌಹಾರ್ದ ಕೊ ಅಪರೇಟಿವ್ ನಿಯಮಿತ ಇವರ ಸಹಯೋಗದೊಂದಿಗೆ ನಡೆಯಲಿದೆ.

# ಪತ್ರಿಕೋದ್ಯಮ ಪದವೀಧರರಿಗೆ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿಗೆ ಪರಿಶಿಷ್ಟ ಜಾತಿಯ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಬೆಳಗಾವಿ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 35 ವರ್ಷದೊಳಗಿನ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು.

ಮೆರಿಟ್ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ತರಬೇತಿಯ ಅವಧಿ ವೇಳೆ ಮಾಹೆಯಾನ 15,000 ರೂ.ಗಳ ಸ್ಟೈಫಂಡ್ ನೀಡಲಾಗುವುದು.

ಈ ತರಬೇತಿಯು 12 ತಿಂಗಳ ಅಪ್ರೆಂಟಿಸ್ ತರಬೇತಿಯಾಗಿದ್ದು, ತಾತ್ಕಾಲಿಕವಾಗಿರುತ್ತದೆ.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಸಲ್ಲಿಸಲು ಡಿಸೆಂಬರ್ 6, 2023 ಕೊನೆಯ ದಿನವಾಗಿದೆ. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು.

ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಜಿಲ್ಲಾ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು.

ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.

ಈ ಮೇಲ್ಕಂಡ ಷರತ್ತುಗಳನ್ನು ಪಾಲಿಸುವುದಾಗಿ ಆಯ್ಕೆಯಾದ ಅಭ್ಯರ್ಥಿಗಳು 20 ರೂ.ಗಳ ಛಾಪಾ ಕಾಗದದಲ್ಲಿ ಲಿಖಿತ ಹೇಳಿಕೆ ನೀಡಬೇಕು.

ಆಸಕ್ತರು, ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಉಪ ನಿರ್ದೇಶಕರ ಕಚೇರಿ, "ವಾರ್ತಾಭವನ", ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನ್ಯಾಯಾಲಯ ಆವರಣ, ಬೆಳಗಾವಿ ಅಥವಾ ಮೊಸಂ.9448589639 ಸಂಪರ್ಕಿಸಬಹುದು ಎಂದು ವಾರ್ತಾ ಇಲಾಖೆಯ ಉಪ ನಿರ್ದೇಶಕರಾದ ಗುರುನಾಥ ಕಡಬೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 24ರಂದು "ಸ್ಕೂಲ್ ಡೇಸ್" ರಾಜ್ಯಾದ್ಯಂತ ತೆರೆಗೆ: ಉಮೇಶ ಹಿರೇಮಠ

ಬೆಳಗಾವಿ: ಶಾಲಾ ದಿನಗಳನ್ನು ಮೇಲುಕು ಹಾಕುವ ಬಹು ನಿರೀಕ್ಷಿತ ಚಲನಚಿತ್ರ "ಸ್ಕೂಲ್ ಡೇಸ್" ನ.24ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ ಎಂದು ನಿರ್ಮಾಪಕ ಉಮೇಶ ಹಿರೇಮಠ ತಿಳಿಸಿದರು.

ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಸ್ಕೂಲ್ ಡೇಸ್" ಚಿತ್ರ ಸಂಪೂರ್ಣ ಉತ್ತರ ಕರ್ನಾಟಕದ ಭಾಷೆಯ ಸೊಗಡಿನಲ್ಲಿ ಮೂಡಿಬಂದಿದೆ.

ವ್ಯಕ್ತಿಯ ಬದುಕಿನ ನೈತಿಕ ಮೌಲ್ಯಗಳನ್ನು ತಿಳಿಸುವ ಈ ಚಿತ್ರವನ್ನು ಬೈಲಹೊಂಗಲದ ಉದ್ಯಮಿ ಹಾಗೂ ಪತ್ರಕರ್ತ ಉಮೇಶ ಹಿರೇಮಠ ತಮ್ಮ 'ಶ್ರೀ ಗುರು ಮಹಾಂತ ಕ್ರಿಯೇಷನ್ಸ್ ಬೈಲಹೊಂಗಲ' ಬ್ಯಾನರ್ ಅಡಿಯಲ್ಲಿ ನಿರ್ಮಿಸಿದ ಚಿತ್ರವನ್ನು ಸಂಜಯ್ ನಿರ್ದೇಶಿಸಿದ್ದಾರೆ ಎಂದರು.



ಚಿತ್ರದ ನಾಯಕಿ ಪ್ರಿಯಾ, ನೇಹಾ ಹಾಗೂ ಸಂದೀಪ್ ನಟನೆಯೊಂದಿಗೆ ಚಿತ್ರ ತೆರೆಗೆ ಬರಲು ಸಜ್ಜಾಗಿದೆ.

ಪ್ರತಿಯೊಬ್ಬರೂ ಶಾಲೆಯ ಆ ದಿನಗಳನ್ನು ನೆನಪಿಸಿಕೊಂಡರೆ. ಆ ತುಂಟಾಟ, ಗೆಳೆಯರ ಒಡನಾಟ, ಕೆಲ ಪೋಲಿತನದ ಚಟುವಟಿಕೆಗಳಿಂದ.. ನಿಧಾನಗತಿಯಲ್ಲಿ ಪ್ರೀತಿಯ ಹೊಳೆಯಲ್ಲಿ ಬೀಳುವಿಕೆ, ಗೆಳೆಯರು ಹಾಗೂ ಶಿಕ್ಷಕರೊಂದಿಗೆ.. ಚೇಷ್ಟೆಗಳ ಸನ್ನಿವೇಶಗಳಲ್ಲಿ ನಮ್ಮ ನಾಡಿನ ಜವಾರಿ ಭಾಷೆಯ ಸೊಗಡಿನ ತುಂಬ ಹಾಸ್ಯಭರಿತ ಸಂಪೂರ್ಣ ಮನರಂಜನಾತ್ಮಕ ಚಲನಚಿತ್ರ ಇದು. ನಾಲ್ವರು ಶಾಲಾ ಸಹಪಾಠಿ ಸ್ನೇಹಿತರು.. ಹತ್ತನೇ ತರಗತಿ ಮುಗಿಸಿದ ಸಂದರ್ಭದಲ್ಲಿನ ಆಗುಹೋಗುಗಳ ರಂಜನೀಯ ಸಂಭಾಷಣೆಗಳ ಚಿತ್ರ "ಸ್ಕೂಲ್ ಡೇಸ್" ನಲ್ಲಿ ಮೂಡಿಬಂದಿದೆ.

ಈ ನಾಡಿನ ವಿಶೇಷ.. ವಿಶಿಷ್ಟ ಪ್ರದೇಶಗಳಲ್ಲಿ ಸ್ಕೂಲ್ ಡೇಸ್ ಚಿತ್ರೀಕರಣವಾಗಿದೆ. ಬೈಲಹೊಂಗಲದ ಚಿತ್ರೋದ್ಯಮಿ ಉಮೇಶ ಹಿರೇಮಠ ಹಾಗೂ ಬೆಳಗಾವಿಯ ಚಿತ್ರ ನಿರ್ದೇಶಕ ಸಂಜಯ್ ಎಚ್. ಹಾಗೂ ಈ ಚಿತ್ರಕ್ಕೆ ಬೆಂಗಳೂರಿನ ಕೆ. ಎಮ್. ಇಂದ್ರರವರು ಸಂಗೀತ ನಿರ್ದೇಶನ ಮಾಡಿದ್ದಾರೆ.

ಪ್ರೇಕ್ಷಕರ ಕಣ್ಮನ ತಣಿಸುವ, ಹೃದಯ ತಟ್ಟುವ ಈ ಚಿತ್ರದ ಒಂದು ವಿಶೇಷ ಸಾಧನೆಗಾಗಿ. ಒಂದು ಹೊಸ ಪ್ರಯತ್ನ. ತಾರಾಗಣದಲ್ಲಿ ಸಂದೀಪ ಎಸ್. ಎಮ್, ಪ್ರಿಯಾ ಸವಡಿ, ಅನಿಕೇತ ಗೌಡ, ಸಂಗಮ್ ಮಠದ, ದರ್ಶನ ರಾಜಣ್ಣವರ, ಪ್ರತೀಕ್, ದಾನೇಶ, ನಮ್ರತಾ, ವಿವೇಕ್, ನೇಹಾ, ಸಾಕ್ಷಿ, ವಿದ್ಯಾ, ಅರ್ಜುನ್ ಬಳ್ಳಾರಿ, ವೀರೇಂದ್ರ, ಅನಿಲ್ ಹಾಗೂ ಸೋಮಶೇಖರ ಸೊಗಲದ ಇದ್ದಾರೆ.


ಕಥೆ–ಚಿತ್ರಕಥೆ–ಸಂಭಾಷಣೆ–ನಿರ್ದೇಶನ: ಸಂಜಯ್ ಎಚ್., ಛಾಯಾಗ್ರಹಣ: ಎ. ಆರ್. ಕೃಷ್ಣ, ಸಂಕಲನ: ಕೆ. ಗಿರೀಶ, ಕೋರಿಯೋಗ್ರಫಿ: ಮದನ್ ಹರಿಣಿ, ಮೇಕಪ್: ಕೀರ್ತಿ ಗೌಡ, ಪ್ರಚಾರ ಕಲೆ: ಮೋಹನ್, ಮಿಕ್ಸಿಂಗ್ ಮಾಸ್ಟಿಂಗ್: ಸುಜೀತ್ ಶ್ರೀಧರ್, ಸಹಕಾರ: ರಣಜೀತ್ ತಿಗಡಿ, ಪಿ. ಆರ್. ಬಿ. ಆಗಿ ಪ್ರಭು ಗಂಜಿಹಾಳ ಹಾಗೂ ವೀರೇಶ ಹಂಡಗಿ ಕಾರ್ಯ ನಿರ್ವಹಿಸಿದ್ದಾರೆ.

ಈ ಹೊಸ ರೀತಿಯ ಚಿತ್ರದಲ್ಲಿ ಮೂರು ವಿಶೇಷ ಬಗೆಯ ಹಾಡುಗಳಿವೆ. ಈ ಚಿತ್ರ ಅದ್ಭುತವಾಗಿ ಮೂಡಿಬಂದಿದ್ದು, ನಿಮ್ಮೆಲ್ಲರ ಸಹಾಯ–ಸಹಕಾರ ಚಿತ್ರಕ್ಕೆ ಅಗತ್ಯವಿದೆ ಎಂದು ಹೇಳಿದರು. ಈ ವೇಳೆ ನಿರ್ದೇಶಕ ಸಂಜಯ್ ಎಚ್, ನಾಯಕಿ ಪ್ರಿಯಾ, ನೇಹಾ ಹಾಗೂ ಸಂದೀಪ್ ಹಾಗೂ ಇತರರು ಇದ್ದರು.

# ಫ್ಲೇರ್ ರೈಟಿಂಗ್ ಇಂಡಸ್ಟ್ರೀಸ್ ಷೇರು ಮಾರಾಟ

ಹುಬ್ಬಳ್ಳಿ:: ಫ್ಲೇರ್ ರೈಟಿಂಗ್ ಇಂಡಸ್ಟ್ರೀಸ್ ಲಿಮಿಟೆಡ್ 2023 ನವೆಂಬರ್ 22ರ ಬುಧವಾರ ಆರಂಭಿಕ ಷೇರು ಬಿಡುಗಡೆ ಮಾಡಲಿದೆ.

ಪ್ರತಿ 5 ರೂಪಾಯಿ ಮುಖಬೆಲೆಯ ಈಕ್ವಿಟಿ ಷೇರುಗಳನ್ನು ಮಾರಾಟ ಮಾಡುವ ಮೂಲಕ ಕಂಪನಿಯು ಸುಮಾರು 593 ಕೋಟಿ ರೂಪಾಯಿ ಸಂಗ್ರಹಿಸಲು ಯೋಜಿಸಿದೆ. ಆರಂಭಿಕ ಷೇರು ಬಿಡುಗಡೆಯ ಕೊಡುಗೆಯಲ್ಲಿ ಸುಮಾರು 292 ಕೋಟಿ ರೂಪಾಯಿ ಮೌಲ್ಯದ ಹೊಸ ಈಕ್ವಿಟಿ ಷೇರುಗಳನ್ನು ಮಾರಾಟ ಮಾಡುವುದು ಹಾಗೂ ಸುಮಾರು 301 ಕೋಟಿ ರೂಪಾಯಿ




ಮೊತ್ತದ ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ ಒಳಗೊಂಡಿದೆ. ಐಪಿಒ ಸಂಬಂಧ 73 ಕೋಟಿ ರೂಪಾಯಿ ಮೌಲ್ಯದ 24,01,315 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲು ಯೋಜಿಸಿದೆ. ಪ್ರತಿ ಈಕ್ವಿಟಿ ಷೇರಿನ ಮಾರಾಟ ದರ 304 ರೂಪಾಯಿ ನಿಗದಿಪಡಿಸಲಾಗಿದೆ. ಹೊಸ ಷೇರುಗಳ ಮಾರಾಟ ಗಾತ್ರ 292 ಕೋಟಿ ರೂಪಾಯಿ ತನಕ ಇರಲಿದೆ. ಆರಂಭಿಕ ಷೇರು ಬಿಡುಗಡೆ ಪ್ರಕ್ರಿಯೆ 2023 ನವೆಂಬರ್ 22ರಂದು ಆರಂಭವಾಗಿ, ನವೆಂಬರ್ 24ರಂದು ಮುಕ್ತಾಯ ಆಗಲಿದೆ. ಕನಿಷ್ಠ 49 ಈಕ್ವಿಟಿ ಷೇರುಗಳು ಮತ್ತು ತಂದ ನಂತರ 49 ಈಕ್ವಿಟಿ ಷೇರುಗಳ ಗುಣಕದಲ್ಲಿ ಸಾರ್ವಜನಿಕರು ಈಕ್ವಿಟಿ ಹರಾಜು ನಡೆಸಲು ಅವಕಾಶ ಕಲ್ಪಿಸಲಾಗಿದೆ.

ಕಂಪನಿಯು ಮಾನ್ಯತೆ ಹೊಂದಿರುವ ಮುಂಬೈ ಷೇರು ವಿನಿಮಯ ಮಾರುಕಟ್ಟೆ ನಿಯಮಿತ ಮತ್ತು ಭಾರತೀಯ ರಾಷ್ಟ್ರೀಯ ಷೇರು ವಿನಿಮಯ ಮಾರುಕಟ್ಟೆ ನಿಯಮಿತ ನಿಯೋಜಿತ ಷೇರು ವಿನಿಮಯ ಮಾರುಕಟ್ಟೆಯಾಗಿ ಆಯ್ಕೆ ಮಾಡಿಕೊಂಡಿದೆ.

ನುವಾಮಾ ವೆಲ್ತ್ ಮ್ಯಾನೇಜ್‌ಮೆಂಟ್ ಲಿಮಿಟೆಡ್ (ಹಿಂದೆ ಎಡೆಲ್‌ವೀಸ್ ಸೆಕ್ಯುರಿಟೀಸ್ ಲಿಮಿಟೆಡ್ ಎಂದು ಕರೆಯಲಾಗುತ್ತಿತ್ತು) ಮತ್ತು ಎಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್ ಕಂಪನಿಗಳು ಈ ಐಪಿಒ ಕೊಡುಗೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿ ಕಾರ್ಯ ನಿರ್ವಹಿಸಲಿವೆ.

# ಜಗಳ ಬಿಡಿಸಲು ಬಂದಿದ್ದ ಪೊಲೀಸರ ವಾಹನವನ್ನೇ ಓಡಿಸಿಕೊಂಡು ಎಸ್ಕೇಪ್ ಆದ ಭೂಪ್

ತುಮಕೂರು: ಅಣ್ತಮ್ಮಂದಿರ ಜಗಳ ಬಿಡಿಸಲು ಬಂದಿದ್ದ ಪೊಲೀಸರ ವಾಹನವನ್ನೇ ಓಡಿಸಿಕೊಂಡು ಆರೋಪಿ ಪರಾರಿಯಾಗಿರುವ ಘಟನೆ ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನ ನಾರಾನಹಳ್ಳಿಯಲ್ಲಿ ನಡೆದಿದೆ.

ಮುನಿಯ ಪೊಲೀಸ್ 112 ವಾಹನವನ್ನು ಓಡಿಸಿಕೊಂಡು ಹೋಗಿದ್ದ ಆರೋಪಿ. ತಡರಾತ್ರಿ ಗ್ರಾಮದ ಸಹೋದರಿಬ್ಬರ ನಡುವೆ ಗಲಾಟೆ ಆಗ್ತಿತ್ತು. ಈ ವೇಳೆ ಆರೋಪಿ ಸಹೋದರ 112 ಕ್ಕೆ ಕರೆ ಮಾಡಿದ್ದ. ಜಗಳ ಬಿಡಿಸಲು ಗ್ರಾಮಕ್ಕೆ 112 ವಾಹನದಲ್ಲಿ ಬಂದಿದ್ದ ಪೊಲೀಸರು. ಈ ವೇಳೆ 112 ವಾಹನದ ಹಿಂಬದಿಯ ಗಾಜು ಒಡೆದಿದ್ದ ಆರೋಪಿ ಮುನಿಯ. ಗಾಜು ಒಡೆದಿದ್ದಕ್ಕೆ ಕಾರು ನಿಲ್ಲಿಸಿ ಹಿಂಬದಿ ಗಾಜು ನೋಡಲು ಹೋದ ಪೊಲೀಸರು.

ಈ ವೇಳೆ ಕಾರಿನೊಳಗೆ ಕುಳಿತು ವೇಗವಾಗಿ ಕಾರು ಓಡಿಸಿಕೊಂಡು ಎಸ್ಕೇಪ್ ಆಗಿದ್ದಾನೆ. ಸತತ ಮೂರು ಗಂಟೆಗಳ ಕಾಲ ಹುಡುಕಾಟ ನಡೆಸಿದ ಬಳಿಕ ಕೊನೆಗೂ 112 ವಾಹನ ಪತ್ತೆ ಯಾಗಿದೆ. ತುಮಕೂರು ತಾಲೂಕಿನ ಹೆಬ್ಬೂರು ಬಳಿ ಬಿಟ್ಟು ಪರಾರಿಯಾಗಿದ್ದ ಆರೋಪಿ ಮುನಿಯ. ಸದ್ಯ ಆರೋಪಿಯನ್ನು ಪತ್ತೆ ಹಚ್ಚಿ ವಶಕ್ಕೆ ಪಡೆದಿರುವ ಪೊಲೀಸರು. ಹೆಬ್ಬೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಸಂಪುಟ: 4 ಸಂಚಿಕೆ: 246 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089